ವಿಜಯಪುರ | ಸಂಪುಟ 01 | ಸಂಚಿಕೆ 228 | ಪುಟ 4 | ₹ 3.00

https://udayarashminews.com udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com Title Code: KARKAN28047 ಗುರುವಾರ, ನವೆಂಬರ್ 2, 2023

“ವಿಜಯಪುರದ ವಿಮಾನ ನಿಲ್ದಾಣಕ್ಕೆ ಅಂತಾರಾಷ್ಟ್ರೀಯ ಮಟ್ಟದ ಸೌಕರ್ಯಗಳು ಇರುವಂತೆ ನೋಡಿಕೊಳ್ಳಲು ಹಲವು ಉಪಕ್ರಮಗಳನ್ನು ಆರಂಭಿಸಿದ್ದೇನೆ. ಎಲ್ಲವೂ ನಿರೀಕ್ಷೆಯಂತೆಯೇ ನಡೆದರೆ ಮುಂದಿನ 3-4 ತಿಂಗಳಲ್ಲಿ ನಿಲ್ದಾಣವು ಉದ್ಘಾಟನೆಯಾಗಲಿದೆ.



– ಎಂ.ಬಿ.ಪಾಟೀಲ
ಜಿಲ್ಲಾ ಉಸ್ತುವಾರಿ ಸಚಿವರು

### ಕರ್ನಾಟಕ ರಾಜ್ಯೋತ್ಸವ ದಿನಾಚರಣೆ | ವಿಶ್ವ ಸಾಹಿತ್ಯಕ್ಕೆ ವಚನ ಸಾಹಿತ್ಯದ ಕೊಡುಗೆ ಅಪಾರ

# ಕನ್ನಡ ಕೇವಲ ಭಾಷೆಯಲ್ಲ, ಕನ್ನಡಿಗರ ಅಸ್ಮಿತೆ

## ಸಚಿವ ಡಾ.ಎಂ.ಬಿ.ಪಾಟೀಲ ಅಭಿಮತ

ಉದಯರಶ್ಮಿ ನ್ಯೂಸ್

ವಿಜಯಪುರ: ಕನ್ನಡ ಎನ್ನುವುದು ಕೇವಲ ಭಾಷೆ ಮಾತ್ರವಲ್ಲ, ಅದು ನಮ್ಮ ಸಂಸ್ಕೃತಿ. ಕನ್ನಡವು ಕರ್ನಾಟಕದಲ್ಲಿ ನೆಲೆಸಿರುವ ಎಲ್ಲ ಜನರ ಅಸ್ಮಿತೆಯಾಗಿದೆ. ಈ ಬಾರಿಯ ರಾಜ್ಯೋತ್ಸವವು ಏಳು ಕೋಟಿ ಕನ್ನಡಿಗರ ಪಾಲಿಗೂ ಸಂಭ್ರಮದ ಪರ್ವವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಕರ್ಯ ಅಭಿವೃದ್ಧಿ ಇಲಾಖೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಹೇಳಿದರು.

ಬುಧವಾರ ನಗರದ ಡಾ.ಬಿ.ಆರ್. ಅಂಬೇಡ್ಕರ್ ಕ್ರೀಡಾಂಗಣದಲ್ಲಿ ಕರ್ನಾಟಕ ರಾಜ್ಯೋತ್ಸವದ ಅಂಗವಾಗಿ ರಾಷ್ಟ್ರಧ್ವಜಾರೋಹಣ ನೆರವೇರಿಸಿ, ವಿವಿಧ ಕವಾಯತು ಪಡೆಗಳಿಂದ ಗೌರವ ವಂದನೆ ಸ್ವೀಕರಿಸಿದ ನಂತರ ಮಾತನಾಡಿದ ಅವರು,ನಮ್ಮ ರಾಜ್ಯಕ್ಕೆ 'ಕರ್ನಾಟಕ'ವೆಂಬ ನಾಮಕರಣವಾದ ಶುಭ ಸಂದರ್ಭದ ಸುವರ್ಣ ಮಹೋತ್ಸವ ವರ್ಷವಿದು. ಕರ್ನಾಟಕವು ಮೊದಲಿನಿಂದಲೂ ಉದ್ಯಮಸ್ನೇಹಿ ರಾಜ್ಯವಾಗಿದೆ. ಐಟಿ, ಬಿಟಿ, ಇವಿ, ಸ್ಟಾರ್ಟಪ್, ಹೂಡಿಕೆ ಆಕರ್ಷಣೆ, ಕೈಗಾರಿಕೆಗಳಿಗೆ ಉತ್ತೇಜನ, ರಿಯಾಯಿತಿ/ವಿನಾಯಿತಿ, ಕೈಗಾರಿಕಾ ಪ್ರದೇಶಗಳ ಅಭಿವೃದ್ಧಿ, ಸಂಶೋಧನೆ ಮತ್ತು ಅಭಿವೃದ್ಧಿ, ಒಡಂಬಡಿಕೆಗಳು ಮತ್ತು ಸಹಭಾಗಿತ್ವ ಇವೆಲ್ಲದರಲ್ಲೂ ಕರ್ನಾಟಕವು ದೂರದೃಷ್ಟಿಯುಳ್ಳ ಸಮರ್ಪಕ ನೀತಿಗಳನ್ನು ರೂಪಿಸಿಕೊಂಡು ಬರುತ್ತಿರುವ ಮೊಟ್ಟಮೊದಲ ರಾಜ್ಯವಾಗಿದೆ ಎಂದು ಹೇಳಿದರು.



ಐದು ತಿಂಗಳ ಹಿಂದೆ ಅಸ್ತಿತ್ವಕ್ಕೆ ಬಂದ, ಸಿದ್ದರಾಮಯ್ಯನವರ ನೇತೃತ್ವದ ಸರಕಾರವು ಐದು ಗ್ಯಾರಂಟಿಗಳ ಅನುಷ್ಠಾನದ ಮೂಲಕ ಅಭೂತಪೂರ್ವ ಸಾಧನೆ ಮಾಡಿ, ಇತಿಹಾಸವನ್ನೇ ಸೃಷ್ಟಿಸಿದೆ. ವಿದೇಶಿ ನೇರ ಹೂಡಿಕೆಯಲ್ಲಿ ಇಡೀ ದೇಶದಲ್ಲಿ ಪ್ರಥಮ ಸ್ಥಾನದಲ್ಲಿ ವಿಜೃಂಭಿಸುತ್ತಿದೆ ಎನ್ನುವುದು ಹೆಮ್ಮೆಯ ವಿಚಾರವಾಗಿದೆ. ಈ ಸರಕಾರದಲ್ಲಿ ನನಗೆ, ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಖಾತೆಯ ಜೊತೆಗೆ ಮೂಲಸೌಕರ್ಯ ಅಭಿವೃದ್ಧಿ ಖಾತೆಯ ಹೊಣೆಯನ್ನೂ ವಹಿಸಲಾಗಿದ್ದು, ರಾಜ್ಯವನ್ನು ಕೈಗಾರಿಕಾ ಕ್ಷೇತ್ರದಲ್ಲಿ ಹೊಸ ಎತ್ತರಕ್ಕೆ ಕೊಂಡೊಯ್ಯಬೇಕೆಂಬ ಮಹತ್ವಾಕಾಂಕ್ಷೆ ಹೊಂದಿ, ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದೇನೆ ಎಂದು ಹೇಳಿದರು.

ವಿಜಯಪುರ ಜಿಲ್ಲೆಯು ಕಲೆ, ಸಾಹಿತ್ಯ, ಸಂಸ್ಕೃತಿಗಳಿಗೆ ಹೆಸರುವಾಸಿಯಾಗಿದೆ. ಕನ್ನಡ ನೆಲ-ಜಲದ ಕಾಳಜಿಯನ್ನು ಮಾಡಿದವರು ನಮ್ಮಲ್ಲೂ ಇದ್ದಾರೆ. ವಿಜಯಪುರದ ವಚನ ಗುಮ್ಮಟವೆಂದು ಖ್ಯಾತನಾಮರಾದ ಡಾ|| ಫ.ಗು. ಹಳಕಟ್ಟಿಯವರು ನಮಗೆಲ್ಲ ಪ್ರಾತಃಸ್ಮರಣೀಯರು. ಕನ್ನಡ ಚಳುವಳಿಯ ಪ್ರಮುಖ ಹೋರಾಟಗಾರರಾದ ಚಿಕ್ಕೋಡಿ ತಮ್ಮಣ್ಣಪ್ಪನವರ ಪ್ರೇರಣೆಯಿಂದಾಗಿ ತಮ್ಮ ಜೀವನವನ್ನೇ ವಚನ ಸಾಹಿತ್ಯದ ಸಂರಕ್ಷಣೆಗಾಗಿ ಮುಡುಪಿಟ್ಟು ಬಸವಾದಿ ಪ್ರಮಥರ ವಚನಗಳನ್ನು ಜಗತ್ತಿಗೇ ಪರಿಚಯಿಸಿದರು. ವಿಶ್ವ ಸಾಹಿತ್ಯಕ್ಕೆ ನಮ್ಮ ವಚನ ಸಾಹಿತ್ಯದ ಕೊಡುಗೆಯನ್ನು ಮರೆಯುವಂತಿಲ್ಲ. ನಮ್ಮ ಜಿಲ್ಲೆಯ ಮೊಹರೆ ಹನುಮಂತರಾಯರಾಗಲಿ, ರಾಜಾರಾಮ ದುಬೆ, ಚೆನ್ನಬಸಪ್ಪ ಅಂಬಲಿ ಮುಂತಾದವರು ಮುಂಬೈ ಕರ್ನಾಟಕ ಪ್ರಾಂತ್ಯದ ಹೋರಾಟಗಾರರೊಂದಿಗೆ ಸೇರಿ ಕನ್ನಡ ಚಳುವಳಿಗೆ ನೀಡಿದ ಕೊಡುಗೆ ಅವಿಸ್ಮರಣೀಯವಾದುದು ಎಂದು ಹೇಳಿದರು.

ನಾನು ಕೈಗಾರಿಕಾ ಸಚಿವನಾಗಿ ಅಧಿಕಾರ ವಹಿಸಿಕೊಂಡ ಕೂಡಲೇ, ವಿಜಯಪುರಕ್ಕೆ ಮಂಜೂರಾಗಿದ್ದ ವಿಮಾನ ನಿಲ್ದಾಣಕ್ಕೆ ಅಂತಾರಾಷ್ಟ್ರೀಯ ಮಟ್ಟದ ಸೌಕರ್ಯಗಳು ಇರುವಂತೆ ನೋಡಿಕೊಳ್ಳಲು ಹಲವು ಉಪಕ್ರಮಗಳನ್ನು ಆರಂಭಿಸಿದ್ದೇನೆ. ಮುಖ್ಯವಾಗಿ ಇಲ್ಲಿ ನೈಟ್ ಲ್ಯಾಂಡಿಂಗ್ ಸೌಲಭ್ಯವನ್ನು ಸೇರ್ಪಡೆ ಮಾಡಿದ್ದು, ಇದರಿಂದಾಗಿ ಬೋಯಿಂಗ್ ತರಹದ ವಿಮಾನಗಳು ಕೂಡ ಇಲ್ಲಿಗೆ ಬಂದಿಳಿಯಲಿವೆ. ಇವೆಲ್ಲದಕ್ಕೂ ಅಗತ್ಯ ಆರ್ಥಿಕ ಸಂಪನ್ಮೂಲವನ್ನು ಮಂಜೂರು ಮಾಡಿದ್ದು, ಎಲ್ಲವೂ ನಿರೀಕ್ಷೆಯಂತೆಯೇ ನಡೆದರೆ ಮುಂದಿನ 3-4 ತಿಂಗಳಲ್ಲಿ ವಿಜಯಪುರ ವಿಮಾನ ನಿಲ್ದಾಣವು ಉದ್ಘಾಟನೆಯಾಗಿ, ಇಲ್ಲಿಂದ ವೈಮಾನಿಕ ಸೇವೆಗಳು ಆರಂಭವಾಗಲಿವೆ.ಇದರಿಂದಾಗಿ ಕಲ್ಯಾಣ ಕರ್ನಾಟಕದ ಭಾಗದಿಂದ ಪಕ್ಕದ ಮಹಾರಾಷ್ಟ್ರ, ಗೋವಾ, ತೆಲಂಗಾಣ, ದೆಹಲಿ, ಗುಜರಾತ್ ಮುಂತಾದ ರಾಜ್ಯಗಳೊಂದಿಗೆ ಔದ್ಯಮಿಕ, ಶೈಕ್ಷಣಿಕ, ಔದ್ಯೋಗಿಕ, ಆರ್ಥಿಕ ಒಡನಾಟಗಳು ತೀವ್ರ ಗತಿಯಲ್ಲಿ ನಡೆಯಲಿವೆ. ಮುಖ್ಯವಾಗಿ, ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಲ್ಲಿನ ದ್ರಾಕ್ಷಿ ಬೆಳೆಯ ವ್ಯಾಪಾರ ಮತ್ತು ರಫ್ತು ಚಟುವಟಿಕೆಗಳಿಗೆ ಹೆಬ್ಬಾಗಿಲು ತೆರೆದುಕೊಳ್ಳಲಿದೆ ಎಂದು ಹೇಳಿದರು.

ನೂತನ ಸರಕಾರವು ಅಸ್ತಿತ್ವಕ್ಕೆ ಬಂದ ಕೆಲವೇ ದಿನಗಳಲ್ಲಿ ಮಂಡಿಸಲ್ಪಟ್ಟ ಬಜೆಟ್ಟಿನಲ್ಲಿ ವಿಜಯಪುರಕ್ಕೆ ಮ್ಯಾನಫ್ಯಾಕ್ಚರಿಂಗ್ ಹಬ್ ಅನ್ನು ಮಂಜೂರು ಮಾಡಲಾಗಿದೆ. ಇದರಿಂದಾಗಿ, ಕೈಗಾರಿಕಾ ವಲಯದಲ್ಲಿ ತಯಾರಿಕೆಯ ಚಟುವಟಿಕೆಗಳು ಇಲ್ಲಿ ನೆಲೆಗೊಂಡು, ಸಾವಿರಾರು ಉದ್ಯೋಗಗಳು ಸ್ಥಳೀಯ ಯುವಜನರಿಗೆ ಸಿಗಲಿವೆ.

ಈ ವರ್ಷದ ರಾಜ್ಯೋತ್ಸವ ವಿಶೇಷವೆಂದರೆ, ಕರ್ನಾಟಕ ಸರ್ಕಾರವು 2023ರ ನವೆಂಬರ್ 01 ರಿಂದ 2024ರ ನವೆಂಬರ್ 1 ರವರೆಗೆ ಕರ್ನಾಟಕ ಸಂಭ್ರಮ 50ನ್ನು “ಹೆಸರಾಯಿತು ಕರ್ನಾಟಕ ಉಸಿರಾಗಲಿ ಕನ್ನಡ” ಎಂಬ ಅಭಿಯಾನವನ್ನು ವರ್ಷಪೂರ್ತಿ ಆಚರಿಸಲಿದೆ.ಯುವಜನತೆಯಲ್ಲಿ “ಕನ್ನಡ-ಕನ್ನಡಿಗ-ಕರ್ನಾಟಕದ ಅರಿವು” ಮೂಡಿಸುವ ಯೋಜನೆಗಳನ್ನು ಕೂಡಾ ಹಮ್ಮಿಕೊಳ್ಳುವುದಾಗಿ ಘೋಷಿಸಿದೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸಲಾಯಿತು. ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶಿಂಧೆ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ, ವಿಜಯಪುರ ಉಪವಿಭಾಗಾಧಿಕಾರಿ ಬಸಣಪ್ಪ ಕಲಶೆಟ್ಟಿ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು, ಕನ್ನಡಪರ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

## ಕನ್ನಡ ಕಸ್ತೂರಿ ಕಂಪು ಪಸರಿಸುವಂತೆ ಮಾಡಿದವರು

ವಿಜಯಪುರ ಜಿಲ್ಲೆಯ ಗಡಿಭಾಗದಲ್ಲಿ ಕನ್ನಡ ಕಸ್ತೂರಿಯ ಕಂಪು ಸದಾಕಾಲ ಪಸರಿಸುವಂತೆ ಮಾಡಿದವರಲ್ಲಿ ಹಲಸಂಗಿಯ ಮಧುರಚೆನ್ನರು, ಸಿಂಪಿ ಲಿಂಗಣ್ಣನವರು, ಪಿ.ಧೂಲಾಸಾಬ ಮುಂತಾದ ಕನ್ನಡ ಪ್ರೇಮಿಗಳು ಜನಪದ ಸಾಹಿತ್ಯ ಲೋಕವನ್ನು ಸೃಷ್ಟಿಸಿ ಅದರ ಸವಿಯನ್ನು ಕನ್ನಡಿಗರಿಗೆ ಉಣಬಡಿಸಿದ್ದಾರೆ. ಹಲಸಂಗಿ ಗೆಳೆಯರ ಬಳಗ, ಎಕ್ಸಂಬಾದ ಕನ್ನಡ ಸಂಘ, ಗಡಿ ಪ್ರದೇಶಗಳಲ್ಲಿ ಕ್ರಿಯಾಶೀಲವಾಗಿದ್ದ ಕನ್ನಡಪರ ಸಂಘಟನೆಗಳ ಕಾಣಿಕೆಯೂ ಪ್ರಶಂಸನೀಯವಾದುದು. ವಿಜಯಪುರ ಜಿಲ್ಲೆ ಕನ್ನಡ ಸಾಹಿತ್ಯಕ್ಕೆ ಹಲವು ಕೊಡುಗೆಗಳನ್ನು ನೀಡಿದೆ. ನಮ್ಮ ಜಿಲ್ಲೆಯ ಪೂಜ್ಯ ಬಂಥನಾಳ ಶಿವಯೋಗಿಗಳು, ಡಾ. ರಾನಡೆ ಆರ್.ಡಿ., ಗಣಪತರಾವ್ ಮಹಾರಾಜ, ನಿಂಗಣ್ಣ ಸಿಂಪಿ, ಮಧುರಚೆನ್ನ, ಧೂಲಾಸಾಹೇಬ, ರಂ.ಸಿ.ಮುಗಳಿ, ಶ್ರೀರಂಗರು, ಲಕ್ಕಪ್ಪ ಶಿರಹಟ್ಟಿ, ಡಾ. ಗುರುಲಿಂಗ ಕಾಪಸೆ, ಡಾ. ಕೃಷ್ಣ ಕೊಲ್ಹಾರಕುಲಕರ್ಣಿ, ಪ್ರೊ. ಎನ್.ಜಿ.ಕರೂರ, ಪ್ರೊ. ಸಂಗಮನಾಥ ಹಂಡಿ, ಶಿಶು ಸಂಗಮೇಶ, ಸಂಗಮೇಶ ಬಾಗಲಕೋಟ, ಈಶ್ವರಚಂದ್ರ ಚಿಂತಾಮಣಿ, ಶರಣಪ್ಪ ಕಂಚ್ಯಾಣಿ, ಕಾ.ಹು.ವಿಜಾಪುರ, ಪಾ.ಭಿ.ಪಾಟೀಲ, ಹ.ಮ.ಅಂಬಿಗೇರ, ಈಶ್ವರ ಕಾಪಸೆ, ಡಾ. ಬಿ.ಎಸ್.ಶೇತ, ಡಾ. ಎಂ.ಎನ್.ವಾಲಿ, ಡಾ. ಬಿ.ಬಿ.ಹೆಂಡಿ, ಡಾ. ಎಸ್.ಕೆ.ಕೊಪ್ಪಾ, ಡಾ. ಎಂ.ಎಂ.ಪಡಶೆಟ್ಟಿ, ಡಾ. ಚನ್ನಪ್ಪ ಕಟ್ಟಿ, ಪ್ರೊ. ಬಿ.ಎಂ.ಹಿರೇಮಠ, ಮುದ್ದೇಬಿಹಾಳ, ಡಾ. ಅರವಿಂದ ಮಾಲಗತ್ತಿ, ಡಾ. ರಾಜಶೇಖರ (ರಾಗಂ), ಶ್ರೀ ಹ.ಮ.ಪೂಜಾರ-ಸಿಂದಗಿ, ದಾನಪ್ಪ ಜತ್ತಿ,ಪ್ರೊ. ಬಿ.ಆರ್.ಪೋಲಿಸ್‌ಪಾಟೀಲ, ಅರ್ಜುನ ಗೊಳಸಂಗಿ, ಡಾ. ಅಮೀರುದ್ದೀನ ಖಾಜಿ, ಸೋಮನಾಥ ಯಾಳವಾರ, ಎ.ಕೆ.ರಾಮೇಶ್ವರ, ರಂಜಾನ್ ದರ್ಗಾ, ಮಹಾಂತ ಗುಲಗಂಜಿ, ಡಾ. ಎಂ.ಎಸ್.ಮದಭಾವಿ, ಡಾ. ಸಿ.ಎಸ್. ಯರವಿನತೆಲಿಮಠ ಸೇರಿದಂತೆ ಇನ್ನೂ ನೂರಾರು ಹಿರಿಯರು ಹಾಗೂ ಇತ್ತೀಚಿನ ಹಲವು ಉದಯೋನ್ಮುಖ ಸಾಹಿತಿಗಳು ನಮ್ಮ ಜಿಲ್ಲೆಯಿಂದ ಕನ್ನಡ ಭಾಷೆಯನ್ನು ತಮ್ಮ ಸಾಹಿತ್ಯದ ಮೂಲಕ ಶ್ರೀಮಂತಗೊಳಿಸಿದ್ದಾರೆ ಎಂದು ಹೇಳಿದರು.

## ಮೆರವಣಿಗೆಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಚಾಲನೆ




ನಗರದ ಶ್ರೀ ಸಿದ್ದೇಶ್ವರ ದೇವಸ್ಥಾನದಿಂದ ಹಮ್ಮಿಕೊಂಡ ತಾಯಿ ಭುವನೇಶ್ವರಿ ಭಾವಚಿತ್ರ ಮೆರವಣಿಗೆ ಹಾಗೂ ಆಕರ್ಷಕ ಸ್ತಬ್ಧಚಿತ್ರ ಮೆರವಣಿಗೆಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಚಾಲನೆ ನೀಡಿದರು. ವಿವಿಧ ಇಲಾಖೆಯ ಸ್ತಬ್ಧಚಿತ್ರಗಳು, ಕಲಾತಂಡಗಳು, ಕನ್ನಡಮಯ ವಾತಾವರಣದ ಮೆರಗನ್ನು ಹೆಚ್ಚಿಸಿತು. ಶಾಲಾ ಕಾಲೇಜಿನ ವಿದ್ಯಾರ್ಥಿಗಳಿಂದ ನಾಡು-ನುಡಿ ಪ್ರತಿಬಿಂಬಿಸುವ ಆಕರ್ಷಕ ನೃತ್ಯ ಪ್ರದರ್ಶನ ಕ್ರೀಡಾಂಗಣದಲ್ಲಿ ನೆರೆದ ಜನಸ್ತೋಮವನ್ನು ರಂಜಿಸಿತು.

ಪಥಸಂಚಲನ: ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಐಆರ್‌ಬಿ ಪೋಲಿಸ್ ಪಡೆ, ನಾಗರಿಕ ಪೋಲಿಸ್ ಪಡೆ, ಗೃಹರಕ್ಷಕದಳ, ಅರಣ್ಯ ಇಲಾಖೆ, ಅಗ್ನಿಶಾಮಕ ಇಲಾಖೆ, ಎನ್‌ಸಿಸಿ ಸೀನಿಯರ್ ವಿಭಾಗ, ಶಾಂತಿನಿಕೇತನ ಸಿಬಿಎಸ್‌ಸಿ ಇಂಟರ್‌ನ್ಯಾಶನಲ್ ಶಾಲೆ, ಕೆ.ಜಿ.ಎಂ.ಪಿ.ಎಸ್. ರಮಾಬಾಯಿ ಅಂಬೇಡ್ಕರ್ ಗೈಡ್ಸ್ ತಂಡ ತೊರವಿ, ಎಚ್.ಪಿ.ಎಸ್. ಶಾಂತಿನಗರ ತೊರವಿ, ಮಹಾತ್ಮಗಾಂಧಿ ಪ್ರೌಢಶಾಲೆ ಕೆಎಚ್‌ಪಿಎಸ್-12 ದರ್ಗಾ ಶಾಲೆ, ರಂಭಾಪುರ ಕೆಬಿಎಸ್ ನಂ.5, ಸೆಂಟ್ ಜೋಶೆಫ್ ಶಾಲೆ, ಸಂಗನಬಸವ ಅಂತರರಾಷ್ಟ್ರೀಯ ಶಾಲೆ, ಬಾಲಕ-ಹಾಗೂ ಬಾಲಕಿಯರು ಪೋಲಿಸ್ ವಾದ್ಯವೃಂದ ಭಾಗವಹಿಸಿದ್ದವು.

### ರಾಜ ನುಡಿ

ಓ ಮನುಜ ನೀ ಕನ್ನಡ ಭಾಷೆಯ
ಕಲಿತರೆ ಕಸ್ತೂರಿಯ ಘಮಿಸುವೆ
ಕಲಿಸಿದರೆ ಶ್ರೀಗಂಧ ಸ್ಫುರಿಸುವೆ.

-ಡಾ. ರಾಜಶೇಖರ ನಾಗೂರ



### ವಚನ ಚಿಂತನ 224

#### ಸೃಷ್ಟಿಯ ಮಹಾಸ್ಫೋಟ ಸಿದ್ಧಾಂತ

*ಈ ರಚನೆಯೆಂಬುದು*
*ಇಮ್ಮಡಿ ಮುಮ್ಮಡಿಯಿಂದಲ್ಲದೆ ಒಮ್ಮಡಿಯಿಂದಾಗದು.*
*ಆದಿಯಲ್ಲಿ ಬ್ರಹ್ಮ, ಅನಾದಿಯಲ್ಲಿ ಏನೆಂಬುದಿಲ್ಲ.*
*ಇತ್ತಲದು ಮಾಯಾಶಕ್ತಿಯಿಂ ಮಾಧವನ ಉತ್ಪತ್ತಿ;*
*ಮಾಧವನ ಉತ್ಪತ್ತಿಯಿಂ ಮೂಲೋಕ ನಿಮಿರಿತ್ತು ನೋಡಾ,*
*– ಕಪಿಲಸಿದ್ಧಮಲ್ಲಿಕಾರ್ಜುನಾ.*


ಈ ವಚನದಲ್ಲಿ ಸಿದ್ಧರಾಮೇಶ್ವರರು ಈ ಸೃಷ್ಟಿಯು ಕೇವಲ ಒಂದೇ ದಿನದಲ್ಲಿ ಉದಯಿಸಿದೆ ಎಂದು ನಂಬುವ ಅನೇಕ ಧಾರ್ಮಿಕ ಗ್ರಂಥಗಳ ವಿಚಾರವನ್ನು ತಳ್ಳಿಹಾಕುತ್ತ, ಆಧುನಿಕ ವಿಜ್ಞಾನಿಗಳ ಮಹಾಸ್ಫೋಟ ಸಿದ್ಧಾಂತದ ತತ್ವಗಳನ್ನು ನಾವು ಕಾಣುತ್ತೇವೆ. ವಚನದ ಪ್ರಾರಂಭದಲ್ಲಿ ಹೇಳಿದ ಆದಿಯಲ್ಲಿ ಬ್ರಹ್ಮ, ಎಂಬುದು ವಿಜ್ಞಾನಿಗಳ ಅಭಿಪ್ರಾಯವನ್ನೇ ಸಿದ್ಧರಾಮೇಶ್ವರರು ಆದಿಮೂಲ ಪರಮಾಣವನ್ನು ಬ್ರಹ್ಮವೆಂದು ಕರೆದಿರುವುದು ಹಾಗೂ ಆದಿಮೂಲ ಪರಮಾಣುವಿನ ಉಗಮಕ್ಕೂ ಪೂರ್ವದಲ್ಲಿ ಏನೇನು ಇರಲಿಲ್ಲ ಎಂಬುದು ಅನಾದಿಯಲ್ಲಿ ಏನೆಂಬುದಿಲ್ಲ ಎಂದಿರುವುದನ್ನು ಕಾಣುತ್ತೇವೆ. ಮುಂದುವರೆದು “ಇಮ್ಮಡಿ ಮುಮ್ಮಡಿಯಿಂದಲ್ಲದೆ ಒಮ್ಮಡಿಯಿಂದಾಗದು” ಎನ್ನುವಲ್ಲಿ ಈ ಸೃಷ್ಟಿಯು ಮಹಾಸ್ಫೋಟದ ಮೂಲಕ ಅನೇಕ ಹಂತಗಳನ್ನು ಕ್ರಮಿಸಿ ಈಗಿನ ಸ್ಥಿತಿ ತಲುಪಿದೆ ಎಂಬ ವೈಜ್ಞಾನಿಕ ಸತ್ಯವನ್ನು ಬಿಚ್ಚಿಟ್ಟಿದ್ದಾರೆ. ಆ ಆದಿಮೂಲ ಪರಮಾಣು ಮಾಧವನಿಂದ ಉತ್ಪತ್ತಿಯಾಗಿದೆ ಎಂಬ ಅಂಶವನ್ನು ಅರುಹುತ್ತಾ ವಿಜ್ಞಾನಿಗಳಿಗೆ ಅರ್ಥವಾಗದ ಆದಿ ಮೂಲಪರಮಾಣುವಿನ ಮೂಲವನ್ನು ಅರಿಯುವ ಪ್ರಯತ್ನವನ್ನು ಮಾಡಿದ್ದಾರೆ.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಕನ್ನಡ ಅನ್ನದ ಭಾಷೆ :ಶಾಸಕ ಮನಗೂಳಿ

ಉದಯರಶ್ಮಿ ನ್ಯೂಸ್

ಸಿಂದಗಿ: ಕನ್ನಡ ನಾಡಿನಲ್ಲಿ ಕನ್ನಡವೇ ಪ್ರಥಮ, ಪ್ರಧಾನ, ಸಾರ್ವಭೌಮವಾಗಬೇಕು. ಉಳಿದ ಅನ್ಯ ಭಾಷೆಗಳು ಕನ್ನಡ ನೆಲದಲ್ಲಿ ಸೇವಕರಾಗಿ ಕೆಲಸ ಮಾಡಬೇಕು ಎಂದು ಎಚ್.ಜಿ.ಪಪೂ ಮಹಾವಿದ್ಯಾಲಯದ ಉಪನ್ಯಾಸಕ ಸಿದ್ದಲಿಂಗ ಕಿಣಗಿ ಹೇಳಿದರು.



ಬುಧವಾರದಂದು ನಗರದ ಬಸವ ಮಂಟಪದಲ್ಲಿ ತಾಲೂಕು ಆಡಳಿತ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಸಹಯೋಗದಲ್ಲಿ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವದಲ್ಲಿ ಉಪನ್ಯಾಸ ನೀಡಿದ ಅವರು, ಕನ್ನಡ ನಾಡನ್ನು ಕನ್ನಡ ನಾಡು, ಶ್ರೀಗಂಧದ ನಾಡು, ಕರುನಾಡ ನಾಡು, ಸಾಧು-ಸಂತರು, ದಾಸರು, ಶಿವಶರಣರು ಹಾಗೂ ಕವಿಗಳಿಂದ ಕಂಗೊಳಿಸುತ್ತಿರುವ ಕನ್ನಡ ನಾಡು ಎಂಬ ಹೆಸರೇ ಒಂದು ಧೀಮಂತ ಶಕ್ತಿ. ಕನ್ನಡ ಅನ್ನದ ಭಾಷೆ, ಜೀವದ ಭಾಷೆ, ಪವಿತ್ರ ಭಾಷೆ, ಹೃದಯ ಭಾಷೆಯಾಗಿ ನಾವು ಕಾಣಬೇಕಾಗಿದೆ. ಏಕೆಂದರೆ ಆಂಗ್ಲದಲ್ಲಿ ಅನೇಕ ತಪ್ಪುಗಳನ್ನು ಕಾಣಬಹುದು ಆದರೆ ಕನ್ನಡ ಭಾಷೆ ಅಥವಾ ಪದದಲ್ಲಿ ಯಾವುದೇ ಒಂದು ತಪ್ಪನ್ನು ಕಾಣಲು ಸಾಧ್ಯವಿಲ್ಲ. ಕಾರಣ ಕನ್ನಡದ ಪ್ರತಿಯೊಂದ ಅಕ್ಷರ ಸಂಶೋಧನೆಯಿಂದ ಮೂಡಿ ಬಂದಿರುವ ಪದಗಳು. ನಾವೆಲ್ಲರೂ ನವೆಂಬರ್ ಕನ್ನಡಿಗರಾಗದೇ ನಂ: 01 ಕನ್ನಡಿಗರಾಗೋಣ. ನಂ:01 ಕನ್ನಡಿಗರಾದರೇ ಸಾವಿರ ಸಾವಿರ ವರ್ಷಗಳ ಸುದೀರ್ಘ ಇತಿಹಾಸವನ್ನು ನಾವೆಲ್ಲ ಕಾಣುತ್ತೇವೆ ಎಂದರು.

ಇದೇ ಸಂದರ್ಭದಲ್ಲಿ ಅಧ್ಯಕ್ಷತೆ ವಹಿಸಿದ ಶಾಸಕ ಅಶೋಕ ಮನಗೂಳಿ ಮಾತನಾಡಿ, ಸ್ವತಂತ್ರ ಪೂರ್ವ ಮತ್ತು ಸ್ವತಂತ್ರದ ನಂತರ ಕರ್ನಾಟಕ ರಾಜ್ಯವನ್ನು ಏಕೀಕರಣ ಮಾಡಬೇಕು. ಈ ಅಖಂಡ ಕರ್ನಾಟಕವನ್ನು ಒಗ್ಗೂಡಿಸಿ ಈ ನೆಲದ ಮತ್ತು ಜಲದ ಅಭಿಮಾನವನ್ನು ನಮ್ಮ ಜನತೆಗೆ ವ್ಯಕ್ತ ಮಾಡಬೇಕೆನ್ನುವ ನಮ್ಮ ಹಿರಿಯರು ಮಾಡಿದ ತ್ಯಾಗ, ಬಲಿದಾನದ ದಿನವನ್ನು ಇಂದು ನಾವು ಕರ್ನಾಟಕ ರಾಜ್ಯೋತ್ಸವೆಂದು ಆಚರಣೆ ಮಾಡುತ್ತಿದ್ದೇವೆ. ಮಾತನಾಡುವ ಭಾಷೆ ಕನ್ನಡ, ಅನ್ನ ನೀಡುವ ಭಾಷೆ ಕನ್ನಡ. ಪ್ರತಿ ಮನೆ ಮನಗಳಲ್ಲಿ ಕನ್ನಡ ರಾರಾಜಿಸಲಿ ಎಂದರು.

ಸಿಂದಗಿ ನಗರದಲ್ಲಿ ಬುಧವಾರದಂದು ಕನ್ನಡ ರಾಜ್ಯೋತ್ಸವದ ಸಡಗರ ಮುಗಿಲು ಮುಟ್ಟಿತ್ತು. ತಾಲೂಕು ಆಡಳಿತ ಹಾಗೂ ಕನ್ನಡ ಸಾಹಿತ್ಯ ಪರಿಷತ್ತು, ಕಾರ್ಯನಿರತ ಪತ್ರಕರ್ತರ ಸಂಘ, ಕನ್ನಡ ಮನಸುಗಳ ಸಹಯೋಗದೊಂದಿಗೆ ಎಂಟು ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರ ಭಾವಚಿತ್ರಗಳ ಮೆರವಣಿಗೆ ಮಾಡಲಾಯಿತು. ಈ ಬಾರಿಯ ರಾಜ್ಯೋತ್ಸವ ಆಚರಣೆಯಲ್ಲಿ ಹಗಲು ವೇಷಧಾರಿಗಳು ವಿಶೇಷವಾಗಿ ಗಮನ ಸೆಳೆಯಿತು.

ಇದೇ ಸಂದರ್ಭದಲ್ಲಿ ತಾಲೂಕು ದಂಡಾಧಿಕಾರಿ ಪ್ರದೀಪಕುಮಾರ ಹಿರೇಮಠ ಪ್ರಸ್ತಾವಿಕವಾಗಿ ಮಾತನಾಡಿದರು. ನಿಕಟಪೂರ್ವ ಅಧ್ಯಕ್ಷ ರಾಜಶೇಖರ ಕೂಚಬಾಳ ಸ್ವಾಗತಿಸಿದರು. ರವಿ ಗೋಲಾ ನಿರೂಪಿಸಿದರು.

ವೇದಿಕೆಯ ಮೇಲೆ ಸಿಪಿಐ ಡಿ.ಹುಲುಗಪ್ಪ, ನೌಕರರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ, ಕ್ಷೇತ್ರ ಶಿಕ್ಷಣಾಧಿಕಾರಿ ಆರೀಫ್ ಬಿರಾದಾರ, ಪುರಸಭೆ ಮುಖ್ಯಾಧಿಕಾರಿ ಗುರುರಾಜ ಚೌಕಿಮಠ, ಕಸಾಪ ತಾಲೂಕಾಧ್ಯಕ್ಷ ಶಿವಾನಂದ ಬಡಾನವರ ಇದ್ದರು.

ಇದೇ ಸಂದರ್ಭದಲ್ಲಿ ಆಯ್.ಎ.ಮಕಂದಾರ, ಮಾಳು ಹೊಸುರ, ಪಿಎಸ್‌ಐ ಭೀಮಪ್ಪ ರಬಕವಿ, ಅಶೋಕ ಅಲ್ಲಾಪೂರ, ಆ.ಎಮ್.ನದಾಫ್, ಎ.ಆರ್. ಹೆಗ್ಗನದೊಡ್ಡಿ, ಸದ್ದಾಂ ಆಲಗೂರ, ಅಶೋಕ ಸುಲ್ಪಿ, ಸುನಂದಾ ಯಂಪುರೆ, ಆಯ್.ಎ ಮಕಾಂದಾರ, ನಿಖಿಲಅಹ್ಮದ್ ಖಾನಾಪುರ, ಸೇರಿದಂತೆ ಕಾರ್ಯಕ್ರಮದಲ್ಲಿ ವಿವಿಧ ಶಾಲೆಯ ಶಿಕ್ಷಕರು, ನಿವೃತ್ತ ಸೈನಿಕರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

# ಆಂಗ್ಲ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವ ಕಲರವ!




ಉದಯರಶ್ಮಿ ನ್ಯೂಸ್

ಆಲಮಟ್ಟಿ : ಆಂಗ್ಲ ಮಾಧ್ಯಮದ ಶಾಲೆ ಇದು. ಆದರೂ ಕನ್ನಡ ಮೋಹ ಉಮ್ಮಳಿಸಿ ಚಿತ್ತಾರದ ರೂಪದಲ್ಲಿ ಪರಿಮಳಿಸಿತು. ಇಲ್ಲಿ ಕನ್ನಡ ರಾಜ್ಯೋತ್ಸವದ ಕಹಳೆ ಕಂಪಾಗಿ, ಇಂಪಾಗಿ, ತಂಪಾಗಿ ಮೂಡಿಬಂತು. ಇಲ್ಲಿನ ಎಂ.ಎಚ್.ಎಂ.ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯಲ್ಲಿ ಬುಧವಾರ ಗುರುಮಾತೆಯರು ಹಾಗೂ ಮಕ್ಕಳು ಕನ್ನಡ ಬಾವುಟ ಬಣ್ಣದ ಉಡುಪುಗಳನ್ನು ತೊಟ್ಟು ಕನ್ನಡ ಸಂಭ್ರಮದಲ್ಲಿ ಪಾಲ್ಗೊಂಡು ಸಂಭ್ರಮಿಸಿದರು. ಕನ್ನಡ ಬೆಳಗಲಿ ಎಂಬ ಭಾವದಿಂದ ದೀಪಗಳನ್ನು ಹಚ್ಚಿ ಪ್ರಾಥಿ9ಸಿದ ನೋಟ ಗಮನ ಸೆಳೆಯಿತು. ಇನ್ನೊಂದೆಡೆ ಹಳಕಟ್ಟಿ ಪ್ರೌಢಶಾಲೆಯ ಮುಖ್ಯ ಗುರು ಜಿ.ಎಂ.ಕೋಟ್ಯಾಳ ಅವರನ್ನು ಶಾಲಾವರಣದಲ್ಲಿ ಚಿಣ್ಣರು ಭೇಟಿ ಮಾಡಿ ಕನ್ನಡ ರಾಜ್ಯೋತ್ಸವದ ಸವಿ ಶುಭಾಶಯ ಹಂಚಿಕೊಂಡು ಖುಷಿಪಟ್ಟಿದ್ದು ವಿಶೇಷವಾಗಿತ್ತು.

## ಕರ್ನಾಟಕ ಭವ್ಯ ಪರಂಪರೆಯ ನಾಡು :ಶಾಸಕ ರಾಜುಗೌಡ

ಉದಯರಶ್ಮಿ ನ್ಯೂಸ್

ದೇವರಹಿಪ್ಪರಗಿ: ತಾಲ್ಲೂಕು ಆಡಳಿತ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಅಡಿಯಲ್ಲಿ 68ನೇ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.



ಪಟ್ಟಣದ ಪ್ರಾಥಮಿಕ ಶಾಲಾ ಆವರಣದಲ್ಲಿ ಬುಧವಾರ ಜರುಗಿದ ಕಾರ್ಯಕ್ರಮದಲ್ಲಿ ತಹಶೀಲ್ದಾರ್ ಪ್ರಕಾಶ ಸಿಂದಗಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಶಾಸಕ ರಾಜುಗೌಡ ಪಾಟೀಲ(ಕುದರಿಸಾಲವಾಡಗಿ) ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಕರ್ನಾಟಕ ನೂರಾರು ವರ್ಷಗಳ ಇತಿಹಾಸ ಹೊಂದಿ, ಭವ್ಯ ಪರಂಪರೆಯ ಮೂಲಕ ಕನ್ನಡ ನಾಡಾಗಿ ಬೆಳಗುತ್ತಿದೆ. ರಾಜ್ಯೋತ್ಸವ ಪ್ರಶಸ್ತಿ ಪಡೆದ ಸಾಧಕರಿಗೆ ಅಭಿನಂದನೆಗಳು ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕಬೂಲ್ ಕೊಕಟನೂರ ಮಾತನಾಡಿ, ನಾಡು ನುಡಿಗಾಗಿ ನಮ್ಮ ಸೇವೆ ಅನನ್ಯವಾಗಬೇಕು ಎಂದರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಕನ್ನಡದಲ್ಲಿ ಹೆಚ್ಚು ಅಂಕ ಗಳಿಸಿದ ಹಾಗೂ ಕ್ರೀಡೆಗಳಲ್ಲಿ ರಾಜ್ಯಮಟ್ಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು.

ಕಾರ್ಯಕ್ರಮದ ಮುಂಚೆ ನಾಡದೇವಿ ಮೆರವಣಿಗೆ ಡೊಳ್ಳು, ಹಲಗೆ, ಸನಾದಿ ವಾದ್ಯಗಳೊಂದಿಗೆ ಮೊಹರೆ ಹಣಮಂತರಾಯ ವೃತ್ತದ ಮೂಲಕ ಸಾಗಿ ಶಾಲಾ ಆವರಣ ತಲುಪಿತು.

ಗಣ್ಯರಾದ ರಿಯಾಜ್ ಯಲಗಾರ, ಶಾಂತಯ್ಯ ಜಡಿಮಠ, ಬಶೀರ್‌ಅಹ್ಮದ್ ಬೇಪಾರಿ, ಉಮೇಶ ರೂಗಿ, ಕಾಶೀನಾಥ ಜಮಾದಾರ, ಕಾಶೀನಾಥ ಬಜಂತ್ರಿ, ಸುಮಂಗಲಾ ಸೆಬೇನವರ, ಮುಖ್ಯಾಧಿಕಾರಿ ಎಲ್.ಡಿ.ಮುಲ್ಲಾ, ಕಿರಿಯ ಆರೋಗ್ಯ ನಿರೀಕ್ಷಕ ಫಿರೋಜ್ ಮುಲ್ಲಾ, ತಾಲ್ಲೂಕು ಪಂಚಾಯಿತಿ ಇಓ ಭಾರತಿ ಚೆಲುವಯ್ಯ, ಪಿಎಸೈ ಬಸವರಾಜ ತಿಪ್ಪಾರೆಡ್ಡಿ, ನಿವೃತ್ತ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಕೆ.ಕುದರಿ, ಡಾ.ಆರ್.ಆರ್.ನಾಯಿಕ, ಬಾಬುಗೌಡ ಪಾಟೀಲ(ಜಿಡ್ಡಿಮನಿ), ಸೋಮು ದೇವೂರ, ಪ್ರಕಾಶ ಮಲ್ಹಾರಿ, ಬಸವರಾಜ ದೇವಣಗಾಂವ, ಎಂ.ಜಿ.ಯಂಕಂಚಿ, ಎ.ಎಚ್. ವಾಲೀಕಾರ, ವಿಜಯಲಕ್ಷ್ಮಿ ನವಲಿ, ಅಶೋಕ ಹೆಗಡೆ, ಅರುಣ ಕೋರವಾರ, ಜಗನ್ನಾಥ ಸಜ್ಜನ, ಪಿ.ಸಿ.ತಳಕೇರಿ, ಜಿ.ಪಿ.ಬಿರಾದಾರ, ರೆಹಮಾನ್ ಕಣಕಾಲ ಸೇರಿದಂತೆ ಸಿದ್ಧೇಶ್ವರ ಸ್ವಾಮೀಜಿ ಶಾಲೆ ಹಾಗೂ ವಿವಿಧ ಶಾಲೆಗಳ ಮಕ್ಕಳು, ಶಿಕ್ಷಕ ಸಿಬ್ಬಂದಿ ಇದ್ದರು.

## ಸಿಂದಗಿ: ವಿವಿಧೆಡೆ ಕನ್ನಡ ರಾಜ್ಯೋತ್ಸವ ಆಚರಣೆ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದ ಹೊರವಲಯದ ಪ್ರೇರಣಾ ಶಾಲೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡಲಾಯಿತು.

ಈ ವೇಳೆ ಶ್ರೀ ಸಮರ್ಥ ವಿದ್ಯಾ ವಿಕಾಸ ಸಂಸ್ಥೆಯ ಅಧ್ಯಕ್ಷ ಆರ್.ಡಿ ಕುಲಕರ್ಣಿ, ನಿರ್ದೇಶಕ ಪಿ.ಡಿ. ಕುಲಕರ್ಣಿ, ಮುಖ್ಯ ಗುರಮಾತೆ ಎಸ್.ಐ ಅಸ್ಕಿ ಸೇರಿದಂತೆ ಸಂಸ್ಥೆಯ ನಿರ್ದೇಶಕ ಮಂಡಳಿ, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಇದ್ದರು.

**ಶ್ರೀ ಪದ್ಮರಾಜ ಮಹಿಳಾ ಕಾಲೇಜು**



ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಕಾಲೇಜಿನಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡಲಾಯಿತು.

ಇದೇ ವೇಳೆ ಪದವಿ ಪ್ರಾಚಾರ್ಯ ಎಮ್.ಎಸ್ ಹೈಯ್ಯಾಳಕರ, ಎಸ್.ಎಂ ಪೂಜಾರಿ, ಉಪನ್ಯಾಸಕರಾದ ಜಿ.ಎ.ನಂದಿಮಠ, ಜಿ.ಎಸ್.ಕುಲಕರ್ಣಿ, ಎಸ್.ಸಿ ದುದ್ದಗಿ, ಹೇಮಾ ಕಾಸರ, ಯು.ಸಿ ಪೂಜೇರಿ, ಪ್ರಭಾವತಿ ಮಾಲಿಪಾಟೀಲ, ಎಂ.ಕೆ ಬಿರಾದಾರ, ಶೃತಿ ಹುಗಾರ, ಸತೀಶ ಕಕ್ಕಸಗೇರಿ, ಶಂಕರ ಕುಂಬಾರ, ವಿಜಯಲಕ್ಷ್ಮಿ ಭಜಂತ್ರಿ ಸೇರಿದಂತೆ ಅನೇಕರಿದ್ದರು.

**ಬ್ಲಾಕ್ ಕಾಂಗ್ರೆಸ್ ಕಛೇರಿ**

ಪಟ್ಟಣದ ಎಪಿಎಂಸಿಯಲ್ಲಿರುವ ಸಿಂದಗಿ ಬ್ಲಾಕ್ ಕಾಂಗ್ರೆಸ್ ಕಛೇರಿಯಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಣೆ ಮಾಡಲಾಯಿತು.

ಇದೇ ವೇಳೆ ಬ್ಲಾಕ್ ಕಾಂಗ್ರೆಸ್ ಸಮಿತಿ ತಾಲೂಕಾಧ್ಯಕ್ಷ ಸುರೇಶ ಪೂಜಾರ, ಜಯಶ್ರೀ ಹದನೂರ, ಶಾರದಾ ಬೆಟಗೇರಿ, ಮಹಾನಂದ ಬಮ್ಮಣ್ಣಿ, ಸುನಂದಾ ಯಂಪುರೆ, ಜ್ಯೋತಿ ಗುಡಿಮನಿ ಸೇರಿದಂತೆ ಪಕ್ಷದ ಕಾರ್ಯಕರ್ತರು ಇದ್ದರು.

**ತಾಲೂಕು ಸಾರ್ವಜನಿಕ ಆಸ್ಪತ್ರೆ**

ಪಟ್ಟಣದ ತಾಲೂಕು ಸಾರ್ವಜನಿಕ ಆಸ್ಪತ್ರೆಯಲ್ಲಿ ಕನ್ನಡ ರಾಜ್ಯೋತ್ಸವವನ್ನು ವಿಜೃಂಬಣೆಯಿಂದ ಆಚರಣೆ ಮಾಡಲಾಯಿತು.

ಈ ವೇಳೆ ಡಾ.ಮಹಾಂತೇಶ ಹಿರೇಮಠ, ರಾಜಶೇಖರ ನರಗೋದಿ, ಎಂ.ಪಿ ಸಾಗರ, ಡಾ. ಮೋಹನ ಬಡಿಗೇರ, ರಾಜಶ್ರೀ ದೊಡ್ಡಮನಿ, ಗೀತಾ ಹಡಪದ, ಹಾಗೂ ಡಾ.ರಾಠೋಡ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿಗಳು ಇದ್ದರು.

**ಎಚ್.ಜಿ.ಪಪೂ ಕಾಲೇಜು**

ನಗರದ ತಾಲೂಕು ಶಿಕ್ಷಣ ಪ್ರಸಾರಕ ಮಂಡಳಿಯ ಎಚ್.ಜಿ. ಪಪೂ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವವನ್ನು ಆಚರಿಸಲಾಯಿತು.

ಈ ವೇಳೆ ಪ್ರಾಚಾರ್ಯ ಎ.ಆರ್. ಹೆಗ್ಗನದೊಡ್ಡಿ, ಉಪನ್ಯಾಸಕರಾದ ಎಸ್.ಎ ಪಾಟೀಲ್, ಆರ್.ಬಿ ಹೊಸಮನಿ, ಆರ್.ಸಿ ಕಕ್ಕಳಮೇಲಿ, ಬಿ.ಎಸ್.ಬಿರಾದಾರ, ಮುಕ್ತಾಯಕ್ಕ ಕತ್ತಿ, ಸತೀಶ ಬಸರಕೋಡ, ಎ.ಬಿ ಪಾಟೀಲ್, ಸಿದ್ದಲಿಂಗ ಕಿಣಗಿ ಸೇರಿದಂತೆ ಮಹಾವಿದ್ಯಾಲಯದ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು.

**ಆರ್.ಡಿ ಪಾಟೀಲ ಮಹಾವಿದ್ಯಾಲಯ**

ಪಟ್ಟಣದ ಶ್ರೀ ಪದ್ಮರಾಜ ವಿದ್ಯಾವರ್ಧಕ ಸಂಸ್ಥೆಯ ಆರ್.ಡಿ.ಪಾಟೀಲ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ 68 ನೇ ಕನ್ನಡ ರಾಜ್ಯೋತ್ಸವದ ಆಚರಣೆ ಮಾಡಲಾಯಿತು.

ಈ ವೇಳೆ ಪ್ರಾಚಾರ್ಯ ವಿಮಲಕಾಂತ ಪಾಟೀಲ, ಉಪನ್ಯಾಸಕರಾದ ಪಿ.ವ್ಹಿ.ಮಹಲಿನಮಠ, ಬಿ.ಬಿ.ಜಮಾದಾರ, ಎನ್.ಬಿ.ಪೂಜಾರಿ, ಡಾ. ವ್ಹಿ.ಪಿ.ನಂದಿಕೋಲ, ಶಿವಶರಣ ಬೂದಿಹಾಳ, ಶಿವರಾಜ ಕುಂದಗೋಳ, ಸಂಗಮೇಶ ಚಾವರ, ಎನ್.ಎಂ.ಶೆಳ್ಳಗಿ, ಡಾ. ಶರಣು ಜೋಗೂರ, ಶರಣು ಹೂಗಾರ, ಗವಿಸಿದ್ದಪ್ಪ ಆನೆಗುಂದಿ, ಎಸ್.ಜಿ.ಮಾರ್ಸನಳ್ಳಿ, ಪ್ರಸನಕುಮಾರ ಜೋಗೂರ ಸೇರಿದಂತೆ ವಿದ್ಯಾರ್ಥಿಗಳು ಇನ್ನಿತರರು ಇದ್ದರು.

## ಸಮಗ್ರ ಕರ್ನಾಟಕದ ಪ್ರಗತಿಗೆ ಶ್ರಮಿಸೋಣ :ಶಾಸಕ ನಾಡಗೌಡ

ಉದಯರಶ್ಮಿ ನ್ಯೂಸ್

ತಾಳಿಕೋಟಿ. ಕನ್ನಡ ನಾಡು- ನುಡಿ ಹಾಗೂ ಸಂಸ್ಕೃತಿಯು ರಕ್ಷಣೆಗಾಗಿ ಹೋರಾಡುವುದು ಪ್ರತಿಯೊಬ್ಬ ಕನ್ನಡಿಗನ ಆದ್ಯ ಕರ್ತವ್ಯವಾಗಿದೆ ಇದಕ್ಕಾಗಿ ನಾವೆಲ್ಲರೂ ಕಂಕಣಭದ್ಧರಾಗೋಣ ಎಂದು ಶಾಸಕ ಸಿ .ಎಸ್. ನಾಡಗೌಡ ಅಪ್ಪಾಜಿ ಹೇಳಿದರು.



ಬುಧವಾರ ಪಟ್ಟಣದ ಸರ್ಕಾರಿ ಕನ್ನಡ ಮಾದರಿ ಪ್ರಾಥಮಿಕ ಶಾಲೆ ಆವರಣದಲ್ಲಿ ತಾಲೂಕ ಆಡಳಿತದ ವತಿಯಿಂದ ಹಮ್ಮಿಕೊಂಡ ಕನ್ನಡ ರಾಜ್ಯೋತ್ಸವ ದಿನಾಚರಣೆ ಕಾರ್ಯಕ್ರಮದಲ್ಲಿ ತಾಯಿ ಭುವನೇಶ್ವರಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ನಾಡ ಧ್ವಜಾರೋಹಣ ನೆರವೇರಿಸಿ ನಂತರ ಅವರು ಮಾತನಾಡಿದರು.

ಕರ್ನಾಟಕದ ಅಖಂಡತೆಯನ್ನು ಉಳಿಸಿಕೊಳ್ಳುವುದು ಅಗತ್ಯವಾಗಿದೆ ಮಹಾತ್ಮ ಗಾಂಧೀಜಿಯವರು ದೇಶದ ಅಖಂಡತೆಯನ್ನು ಬಯಸಿದ್ದರು. ನಾವು ರಾಜಕೀಯ ಹಿತಾಸಕ್ತಿ ಗಳಿಗಾಗಿ ರಾಜ್ಯದ ಇಬ್ಭಾಗವನ್ನು ಬಯಸುವುದು ಸರಿಯಲ್ಲ. ಸಮಗ್ರ ಕರ್ನಾಟಕದ ಪ್ರಗತಿ ಹಾಗೂ ಅಭಿವೃದ್ಧಿ ನಮ್ಮೆಲ್ಲರ ಪರಿಕಲ್ಪನೆ ಆಗಬೇಕು. ಕರ್ನಾಟಕ ವಿಜ್ಞಾನ ತಂತ್ರಜ್ಞಾನ ಹಾಗೂ ಐಟಿಬಿಟಿರಂಗದಲ್ಲಿ ವಿಶ್ವದ ಗಮನಸೆಳೆದ ರಾಜ್ಯವಾಗಿದೆ. ಇಂದಿನ ಯುವ ಪೀಳಿಗೆಗೆ ನಾಡಿನ ಈ ಸಂಸ್ಕೃತಿಯನ್ನು ವರ್ಗಾಯಿಸುವ ಅಗತ್ಯ ಇದೆ ಎಂದರು.

ಸಾಹಿತಿ ಅಶೋಕ ಹಂಚಲಿ ಮಾತನಾಡಿ, ಎರಡು ಸಾವಿರದ ಐನೂರು ವರ್ಷಗಳ ಇತಿಹಾಸ ಕನ್ನಡ ಭಾಷೆಗೆ ಇದೆ ಜಗತ್ತಿನ ಪುರಾತನ 10 ಭಾಷೆಗಳಲ್ಲಿ ಕನ್ನಡ ಭಾಷೆಯು ಕೂಡ ಒಂದು. ಸಾಹಿತ್ಯ ಕಲೆ ಸಂಸ್ಕೃತಿಯ ತವರು ಕನ್ನಡ ಭಾಷೆ. ದೇಶಭಕ್ತಿ ನಾಡ ಭಕ್ತಿ ಅನ್ನುವುದು ಕೇವಲ ಆಚರಣೆಗೆ ಸೀಮಿತವಾಗದೆ ಅದು ದೇಹದ ಕಣಕಣದಲ್ಲಿ ಮೈಗೂಡಬೇಕು ಎಂದು ತಿಳಿಸಿದರು.

ತಹಶೀಲ್ದಾರ್ ಕೀರ್ತಿ ಚಾಲಕ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ನಮ್ಮೆಲ್ಲರ ನಡೆ ನುಡಿ ಕನ್ನಡವಾಗಬೇಕು. ಇದು ನಾಡು-ನುಡಿಯ ರಕ್ಷಣೆಗಾಗಿ ಹೋರಾಡಿದವರನ್ನು ಸ್ಮರಿಸುವ ದಿನವಾಗಿದೆ ಎಂದರು.

ವೇದಿಕೆ ಕಾರ್ಯಕ್ರಮದ ನಂತರ ತಾಯಿ ಭುವನೇಶ್ವರಿ ನಾಡ ದೇವಿಯ ಭಾವಚಿತ್ರದ ಭವ್ಯ ಮೆರವಣಿಗೆ ಪಟ್ಟಣದಲ್ಲಿ ನಡೆಯಿತು. ಇದರಲ್ಲಿ ವಿವಿಧ ವಾದ್ಯ ಮೇಳಗಳು, ಕಲಾತಂಡಗಳು, ಚದ್ಮ ವೇಷಧಾರಿಗಳು ಕನ್ನಡ ಅಭಿಮಾನಿಗಳ ಗಮನ ಸೆಳೆದವು.

ಈ ಸಮಯದಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಬಿ.ಆರ್. ಬಿರಾದಾರ, ಉಪ ತಹಸಿಲ್ದಾರ್ ಜೈನಾಪುರ, ಪುರಸಭೆ ಮುಖ್ಯ ಅಧಿಕಾರಿ ಮೋಹನ ಜಾದವ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಆರ್ .ಎಲ್. ಕೊಪ್ಪದ, ಕರವೇ ಜಿಲ್ಲಾ ಉಪಾಧ್ಯಕ್ಷ ಜೈ ಭೀಮ ಮುತ್ತಗಿ, ಮುಖಂಡರಾದ ಜಿ.ಎಸ್ .ಕಶೆಟ್ಟಿ, ಎಂ.ಜಿ. ಪಾಟೀಲ, ಎಸ್.ಬಿ. ಕಟ್ಟಿಮನಿ, ಸಿದ್ದನಗೌಡ ಪಾಟೀಲ, ಅಲ್ಲಾಭಕ್ಷ ನಮಾಜಕಟ್ಟಿ, ವಿಜಯಸಿಂಗ ಹಜೇರಿ, ಪ್ರಭುಗೌಡ ಮದರ್ಕಲ್, ಎಂ. ಕೆ. ಚೋರಗಸ್ತಿ, ಇಬ್ರಾಹಿಂ ಮನ್ಸೂರ, ಪ್ರಕಾಶ ಹಜೇರಿ, ಮಂಜುನಾಥ್ ಶೆಟ್ಟಿ, ರಾಘು ಚೌಹಾಣ್, ಪುರಸಭೆ ಸದಸ್ಯರಾದ ಅಕ್ಕಮಹಾದೇವಿ ಕಟ್ಟಿಮನಿ, ಮಲ್ಲಿಕಾರ್ಜುನ ಪಟ್ಟಣಶೆಟ್ಟಿ, ಅಣ್ಣಪ್ಪ ಜಗತಾಪ, ಮುದುಕಪ್ಪ ಬಡಿಗೇರ, ಶಿಕ್ಷಕ ರಾಜು ವಿಜಾಪುರ, ಇರಾಜ್ ಸರ್, ವಿವಿಧ ಸಂಘ ಸಂಸ್ಥೆಗಳ ಮುಖ್ಯಸ್ಥರು, ಕನ್ನಡಪರ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು, ವಿವಿಧ ಇಲಾಖೆ ಅಧಿಕಾರಿಗಳು, ಪಟ್ಟಣದ ಗಣ್ಯರು, ಮತ್ತಿತರರು ಇದ್ದರು.

## ಇಂಗ್ಲೀಷ ಪದಗಳ ಬಳಕೆ ಕಡಿಮೆ ಮಾಡಿ :ನಾಯ್ಕಲಮಠ



ಉದಯರಶ್ಮಿ ನ್ಯೂಸ್

ಕೊಲ್ಹಾರ: ಪಟ್ಟಣದ ಸರಕಾರಿ ಕನ್ನಡ ಗಂಡು ಮಕ್ಕಳ ಪ್ರಾಥಮಿಕ ಶಾಲಾ ಆವರಣದಲ್ಲಿ ತಾಲೂಕಾ ಆಡಳಿತದ ಮುಂದಾಳತ್ವದಲ್ಲಿ ಸ್ಥಳಿಯ ಆಡಳಿತ ಮಂಡಳಿಯ ಸಹಯೋಗದೊಂದಿಗೆ ಕರ್ನಾಟಕ ಏಕೀಕರಣದ 68ನೇ ರಾಜ್ಯೋತ್ಸವ ಹಾಗೂ ಮೈಸೂರು ಎಂಬ ಹೆಸರು ಕರ್ನಾಟಕ ಎಂಬ ಹೆಸರಿನಿಂದ ಮರುನಾಮಕರಣಗೊಂಡ 50ನೇ ವರ್ಷಾಚರಣೆಯ ಕಾರ್ಯಕ್ರಮವು ಬಹು ವಿಜ್ರಂಭಣೆಯಿಂದ ಜರುಗಿತು.

ತಾಯಿ ಭುವನೇಶ್ವರಿಯ ಭಾವಚಿತ್ರದ ಮೆರವಣಿಗೆಯು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಶಾಲಾ ಕ್ರೀಡಾಂಗಣ ಆವರಣಕ್ಕೆ ಆಗಮಿಸಿದ ನಂತರ ತಹಶೀಲ್ದಾರ ಎಸ್.ಎಸ್.ನಾಯ್ಕಲಮಠ ಅವರು ಕನ್ನಡ ರಾಜ್ಯೋತ್ಸವದ ಧ್ವಜಾರೋಹಣವನ್ನು ರಾಷ್ಟ್ರಧ್ವಜದ ಆರೋಹಣ ನಂತರ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ವರ್ಷ ಪೂರ್ತಿ ಕನ್ನಡ ಭಾಷೆಯ ಬಳಕೆಯಾಗಬೇಕು ಕರ್ನಾಟಕ ಏಕೀಕರಣದ ಮಹತ್ವವನ್ನು ನಾಡಿನ ಜನತೆಗೆ ಪರಿಚಯಿಸಬೇಕು ಇಂಗ್ಲೀಷ ವ್ಯಾಮೋಹ ಪದಗಳ ಬಳಕೆ ಕಡಿಮೆ ಮಾಡಿ ಕನ್ನಡ ಭಾಷೆಗೆ ಮಹತ್ವವನ್ನು ಸಾರುವ ಸಲುವಾಗಿ ಸರಕಾರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು ಆಡಳಿತ ಯಂತ್ರದೊಂದಿಗೆ ಸಾರ್ವಜನಿಕರು ಸಹಕರಿಸಿ ಕನ್ನಡ ರಾಜ್ಯೋತ್ಸವವನ್ನು ವರ್ಷ ಪೂರ್ತಿ ಅತ್ಯಂತ ವಿಜ್ರಂಬಣೆಯಿಂದ ಆಚರಿಸೋಣ ಎಂದು ಕರೆ ಕೊಟ್ಟರು.

ಈ ಸಂದರ್ಭದಲ್ಲಿ ಉಪನ್ಯಾಸಕರಾಗಿ ಆಗಮಿಸಿದ ರಾಜಶೇಖರ ಉಮರಾಣಿ ಶಿಕ್ಷಕರು ಮಾತನಾಡಿ, ಕರ್ನಾಟಕ ರಾಜ್ಯ ಏಕೀಕರಣವಾಗಲು ಹಲವಾರು ಮಹಣಿಯರ ಪರಿಶ್ರಮ ತ್ಯಾಗದ ಪ್ರತೀಕವಾಗಿದ್ದು, ಅನ್ಯ ಭಾಷೆಯ ವ್ಯಾಮೋಹದಿಂದ ನಾವುಗಳು ಹೊರಬಂದು ನಮ್ಮ ಆಡು ಭಾಷೆ ಕನ್ನಡದ ಉಳಿವಿಗಾಗಿ ಏಳಿಗೆಗಾಗಿ ಶ್ರಮಿಸುವ ದಿಸೆಯತ್ತ ಸಾಗಬೇಕಾದ ಅನಿವಾರ್ಯತೆ ಎದುರಾಗಿದೆ, ಇಂತಹ ಪರಿಸ್ಥಿತಿಯಲ್ಲಿ ಕನ್ನಡಾಭಿಮಾನಿಗಳು ನಾಡಿನ ಉದ್ದಗಲಕ್ಕೂ ಕನ್ನಡ ಭಾಷೆಯ ಬಳಕೆಯಲ್ಲಿ ತೊಡಗಿಕೊಳ್ಳಬೇಕು ಎಂದರು.

ತಾಲೂಕಾ ಆಡಳಿತದ ಕಚೇರಿಗಳು ವಿವಿಧ ಕನ್ನಡಪರ ಸಂಘಟಣೆಗಳ ಪದಾದಿಕಾರಿಗಳು, ಸಂಘ ಸಂಸ್ಥೆಗಳ ಸದಸ್ಯರು, ಪಟ್ಟಣದ ಗಣ್ಯ ವ್ಯಕ್ತಿಗಳು ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಬೀಳಗಿ ಘಟಕದ ವಾಯವ್ಯ ರಸ್ತೆ ಸಾರಿಗೆಯ ಹೊಸ ವಾಹನ ಕನ್ನಡ ಬಾವುಟದೊಂದಿಗೆ ಅಲಂಕೃತಗೊಂಡು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಕನ್ನಡದ ಹಾಡುಗಳ ರಸದೌತಣವನ್ನು ಧ್ವನಿವರ್ಧಕದ ಮೂಲಕ ಕೇಳಿಸಿದ್ದು ಜನರ ಮನಸ್ಸಿಗೆ ಆನಂದವನ್ನು ತಂದಿತು.

ಇದೇ ಸಂಧರ್ಭದಲ್ಲಿ ಚಾಲಕ, ನಿರ್ವಾಹಕರನ್ನು ಗೌರವಿಸಲಾಯಿತು. ಶಿಕ್ಷಣದಲ್ಲಿ ಸಾಧನೆಗೈದ ವಿಧ್ಯಾರ್ಥಿಗಳನ್ನು , ವಿವಿಧ ಕ್ಷೇತ್ರದ ಸಾಧಕರನ್ನು ಗಣ್ಯರನ್ನು ಸನ್ಮಾನಿಸಲಾಯಿತು.

ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಉಮೇಶ ಚಲವಾದಿ, ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ಎಫ್.ಬಿ.ಪಠಾಣ, ಪಟ್ಟಣ ಪಂಚಾಯತಿ ಸದಸ್ಯರಾದ ಚನಮಲ್ಲಪ್ಪ ಗಿಡ್ಡಪ್ಪಗೋಳ, ಅಪ್ಪಸಿ ಮಟ್ಯಾಳ, ಬಾಬು ಭಜಂತ್ರಿ, ನಿಂಗಪ್ಪ ಗಣಿ, ತೌಶಿಪ ಗಿರಗಾಂವಿ, ಶ್ರೀಶೈಲ ಮುಳವಾಡ, ವಿಜಯಮಹಾಂತೇಶ ಗಿಡ್ಡಪ್ಪಗೋಳ, ಸಿದ್ದಪ್ಪ ಗಣಿ, ರಾಜು ವಡ್ಡರ, ಅನೇಕ ಮಹಣಿಯರು ಉಪಸ್ಥಿತರಿದ್ದರು.

## ನಾಡು-ನುಡಿ ಶ್ರೇಷ್ಠತೆ ಸಾರುವುದೇ ರಾಜ್ಯೋತ್ಸವ :ನದಾಫ್

ಉದಯರಶ್ಮಿ ನ್ಯೂಸ್

ಚಡಚಣ: ನಾಡು ನುಡಿಯ ಬಗ್ಗೆ ಅಭಿಮಾನ ಮೂಡಿಸುವ, ನಮ್ಮ ಪರಂಪರೆಯ ಬಗ್ಗೆ ಹೆಮ್ಮೆ ಮೂಡಿಸುವ ಗೀತೆ, ಕವನಗಳನ್ನು ನಾಡಿನ ಹೆಮ್ಮೆಯ ಕವಿಗಳು ರಚಿಸಿದ್ದು, ಇವುಗಳ ಕೇಳುವಿಕೆಯು ನಮ್ಮಲ್ಲಿ ಅಭಿಮಾನವನ್ನು ಮೂಡಿಸುತ್ತದೆ. ಕನ್ನಡ ನಾಡು-ನುಡಿಯು ಶ್ರೇಷ್ಠತೆಯನ್ನು ಸಾರುವುದೇ ಕನ್ನಡ ರಾಜ್ಯೋತ್ಸವವಾಗಿದೆ ಎಂದು ರೇವತಗಾಂವ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಮುಖ್ಯ ಗುರು ಆರ್. ಎಚ್.ನದಾಫ್ ಹೇಳಿದರು.



ಗುರುವಾರದಂದು ರೇವತಗಾಂವ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇಂದಿನ ಜಗತ್ತಿನ ಅಭಿವೃದ್ಧಿಗಾಗಿ ನಾಡು, ನುಡಿ, ಸಂಸ್ಕೃತಿ ಮರೆತು ಮೂಢರಾದೇ ನಮ್ಮತನದ ಅಭಿಮಾನವನ್ನು ತನು-ಮನದಲ್ಲಿ ಮೆರೆಯಲೇಬೇಕಿದೆ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ರಾಷ್ಟ್ರಕವಿ ಕುವೆಂಪು ವಿರಚಿತ ನಾಡಗೀತೆ "ಜಯ ಭಾರತ ಜನನಿಯ ತನುಜಾತೆ", ಹುಯಿಲಗೋಳ ನಾರಾಯಣರಾವ್ ವಿರಚಿತ "ಉದಯವಾಗಲಿ ನಮ್ಮ ಚಲುವ ಕನ್ನಡ ನಾಡು", ಸಾಹಿತಿ ಚನ್ನವೀರ ಕಣವಿಯವರ ವಿರಚಿತ "ಹೆಸರಾಯಿತು ಕರ್ನಾಟಕ", ಸಿದ್ಧಯ್ಯ ಪುರಾಣಿಕ ವಿರಚಿತ " ಹೊತ್ತಿತೋ ಹೊತ್ತಿತೋ ಕನ್ನಡದ ದೀಪ" ಹಾಗೂ ದ.ರಾ.ಭೇಂದ್ರೆಯವರ ವಿರಚಿತ "ಒಂದೇ ಒಂದೇ ಒಂದೇ ಕರ್ನಾಟಕ ಒಂದೇ" ಎಂಬ ಗೀತೆಗಳನ್ನು ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಡಿದರು. ಹಲವು ವಿದ್ಯಾರ್ಥಿಗಳು ಕನ್ನಡ ರಾಜ್ಯೋತ್ಸವದ ಕುರಿತು ಭಾಷಣ ಮಾಡಿದರು.

ಭುವನೇಶ್ವರಿ ದೇವಿಯ ಭಾವಚಿತ್ರ ಪೂಜೆಯನ್ನು ಎಸ್‌ಡಿ-ಎಂಸಿ ಅಧ್ಯಕ್ಷರಾದ ಎಂ.ಡಿ.ಹಕ್ಕೆ, ರಮೇಶ ಮೇತ್ರೆ, ಸವರಾಜ ಕುಂಬಾರ, ಅಶೋಕ ಶೇತೆ ಹಾಗೂ ಗಂಗಾರಾಮ ಶೇತೆಯವರು ನೆರವೇರಿಸಿದರು.

ಈ ವೇಳೆ ಎಸ್‌ಡಿಎಂಸಿ ಅಧ್ಯಕ್ಷರಾದ ಎಂ.ಡಿ.ಹಕ್ಕೆಯವರು ಶಾಲಾ ವಿದ್ಯಾರ್ಥಿಗಳಿಗೆ ಈ ಶೈಕ್ಷಣಿಕ ವರ್ಷಕ್ಕೆ ಬೇಕಾಗುವಷ್ಟು ಬೂಸ್ಟ್ ಫ್ರೀಯಾಗಿ ವಿತರಣೆ ಮಾಡಿದರು.

ಈ ಸಂದರ್ಭದಲ್ಲಿ ಶಾಲಾ ಶಿಕ್ಷಕ ಸಿಬ್ಬಂದಿ ವರ್ಗ, ಎಸ್‌ಡಿ-ಎಂಸಿ ಸದಸ್ಯರುಗಳು ಸೇರಿದಂತೆ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಉದಯರಶ್ಮಿ ನೀವೂ ಬರೆಯಿರಿ..

ನಿಮ್ಮೂರಿನ, ನಿಮ್ಮ ಸುತ್ತಮುತ್ತಲಿನ ಸಮಸ್ಯೆಗಳ ಮೇಲೆ ನೀವೂ ಬೆಳಕು ಚೆಲ್ಲಬಹುದು, ಸಾಮಾಜಿಕ ಸಮಸ್ಯೆಗಳು ಹಾಗೂ ಮಾನವಿಯ ಕಳಕಳಿಯ ಬರಹಗಳನ್ನು ಸಂಬಂಧಿಸಿದ ಫೋಟೊದೊಂದಿಗೆ ನಮಗೆ ಕಳುಹಿಸಿ, 'ಉದಯರಶ್ಮಿ' ದಿನಪತ್ರಿಕೆಯಲ್ಲಿ ಆದ್ಯತೆಯ ಮೇಲೆ ಪ್ರಕಟಿಸಲಾಗುವುದು.

– ಸಂಪಾದಕ

ಇಲ್ಲಿ ಕಳುಹಿಸಿ.. Whatsapp : 7026028778

email: editor.udayarashmi@gmail.com

## ಶಿಕ್ಷಕ ಪ್ರಮೋದಕುಮಾರಗೆ ಸುವರ್ಣ ಸಿರಿ ಪ್ರಶಸ್ತಿ

ಉದಯರಶ್ಮಿ ನ್ಯೂಸ್

ಚಡಚಣ: ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ವತಿಯಿಂದ ಕರ್ನಾಟಕ ಸುವರ್ಣ ಸಂಭ್ರಮದ ಅಂಗವಾಗಿ ಹಮ್ಮಿಕೊಳ್ಳಲಾದ ಕರ್ನಾಟಕ ಸುವರ್ಣ ಸಿರಿ ರಾಜ್ಯ ಪ್ರಶಸ್ತಿಗೆ ವಿಜಯಪುರ ಜಿಲ್ಲೆಯ ಚಡಚಣ ತಾಲ್ಲೂಕಿನ ಉಮರಜ ಗ್ರಾಮದವರಾದ ಶಿಕ್ಷಕ ಸಾಹಿತಿ ಶ್ರೀಪ್ರಮೋದಕುಮಾರ ಮಠಪತಿ ಭಾಜನರಾಗಿದ್ದಾರೆ.



ಶ್ರೀಯುತರ ಶೈಕ್ಷಣಿಕ ಮತ್ತು ಕನ್ನಡ ನಾಡು, ನುಡಿಗಾಗಿನ ಸಾಹಿತ್ಯ ಸೇವೆಯನ್ನು ಪರಿಗಣಿಸಿ ಕರ್ನಾಟಕ ಸುವರ್ಣ ಸಿರಿ ರಾಜ್ಯ ಪ್ರಶಸ್ತಿಗೆ ಆಯ್ಕೆಮಾಡಿ ಅಭಿನಂದಿಸಲಾಗಿದೆ ಎಂದು ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಮುಖ್ಯಸ್ಥರಾದ ಸಾಲಿ ಗ್ರಾಮಶೆಣೈರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಮೋದಕುಮಾರ ಮಠಪತಿ ಇವರು ಪ್ರಸ್ತುತ ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆ ತಾಲ್ಲೂಕಿನ ಮಾಚಹಳ್ಳಿ ಶಾಲೆಯಲ್ಲಿ ಪ್ರೌಢಶಾಲಾ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೀರ ಮಹಿಳೆಯರ ರೂಪದಲ್ಲಿ ಬಾಲೆಯರ ಲಾವಣ್ಯ!



**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಎಳೆಯ ಮೊಗದ ಬಾಲೆಯರು ದಿಟ್ಟತನದ ರೂಪ ತಾಳಿ ತಮ್ಮ ಹಾವಭಾವದ ಮೂಲಕ ಮನೋಜ್ಞವಾಗಿ ನಟನಾ ಕೌಶಲ್ಯ ಪ್ರದಶಿ9ಸಿದರು. ಅವರು ಅಂ-ತಿಂಥ ರೂಪಧಾರಣೆ ಮಾಡಿರಲಿಲ್ಲ. ರೋಷಾಗ್ನಿವೇಶದ ಓನಕೆ ಓಬವ್ವ,ಪ್ರಸನ್ನ ಭಾವದ ನಾಡದೇವತೆ, ವೀರಾವೇಷದ ಕಿತ್ತೂರ ರಾಣಿ ಚೆನ್ನಮ್ಮ ಸೇರಿದಂತೆ ಕರುನಾಡು ಕಂಡ ಮಹಾನ ನಾಯಕಿಯರ ವೇಷಭೂಷಣದಲ್ಲಿ ಕಂಗೊಳಿಸಿ ಭೇಷ್ ಎನಿಸಿಕೊಂಡರು !

ಹೌದು ! ಇವೆಲ್ಲ ರೋಮಾಂಚಕ ದೃಶ್ಯ ವೈಭವ ಕಂಡಿದ್ದು ಆಲಮಟ್ಟಿಯ ಮಂಜಪ್ಪ ಹಡೇ9ಕರ ಕನ್ನಡ ಮಾದ್ಯಮದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ !

ಬುಧವಾರ ಕರುನಾಡವೇ 50 ರ ಕನಾ9ಟಕ ರಾಜ್ಯೋತ್ಸವ ಸಂಭ್ರಮದಲ್ಲಿ ಮೊಳಗಿತ್ತು. ಇಲ್ಲಿಯೂ ಸಡಗರಕ್ಕೇನೂ ಕೊರತೆ ಇರಲಿಲ್ಲ. ಶಾಲಾ ಗುರುಮಾತೆಯರು, ಚಿಕ್ಕ ಮಕ್ಕಳು, ಬಾಲೆಯರು ಕನ್ನಡೋತ್ಸವದಲ್ಲಿ ತೇಲಿ ಸಂತಸ ಪಟ್ಟರು.

ಶಿಕ್ಷಕಿಯರ ಮಾರ್ಗದರ್ಶನದಲ್ಲಿ ಪುಟ್ಟ ಬಾಲೆಯರು ವೀರ ಮಹಿಳೆಯರ ರೂಪದಲ್ಲಿ ಪ್ರದಶಿ9ಸಿದ ಅಭಿಯನ ಎಲ್ಲರ ಚಿತ್ತ ತಮ್ಮತ್ತ ನೆಡುವಂತೆ ಮಾಡಿತು. ಮುಖ್ಯ ಶಿಕ್ಷಕಿ ಕೆ. ಎನ್.ಹಿರೇಮಠ, ಶಿಕ್ಷಕಿಯರಾದ ಯಮನಕ್ಕ ಬಿರಾದಾರ, ಪವಿತ್ರಾ ಪಾಟೀಲ, ಮಂಜುಳಾ ಭಂಡಾ-ರಿ,ಪ್ರಿಯಾಂಕಾ ಚಿಲ್ಲಾಳ,ಅಯಾ ಅಂಜು ಚಿಲ್ಲಾಳ ಮಕ್ಕಳಿಗೆ ಹು-ರಿದುಂಬಿಸಿ ಕನ್ನಡ ರಾಜ್ಯೋತ್ಸವ ಅರ್ಥಪೂರ್ಣವಾಗಿ ಆಚರಿಸಿ ಸಂಭ್ರಮಿಸಿದರು.

# ಕನ್ನಡವೇ ನಮ್ಮ ಜೀವನಶೈಲಿಯಾಗಲಿ :ಎಸಿ ಗದ್ಯಾಳ

**ಉದಯರಶ್ಮಿ ನ್ಯೂಸ್**



ಇಂಡಿ: ಆಡಳಿತದ ಎಲ್ಲ ಹಂತಗಳಲ್ಲೂ ಕನ್ನಡ ಅನುಷ್ಠಾನವಾಗಬೇಕು. ಆದ್ಯತೆ ಬದ್ಧತೆ ಆಗಬೇಕು. ಕರ್ನಾಟಕದಲ್ಲಿ ನೆಲೆಸಿರುವ ಪ್ರತಿಯೊಬ್ಬರಲ್ಲೂ ಕನ್ನಡ ಮೇಳೈಸಲಿ, ಕನ್ನಡವೆಂದರೆ ಜನಜಂಗುಳಿಯಲ್ಲ ಅದು ಜೀವನಶೈಲಿ ಎಂದು ಕಂದಾಯ ಉಪವಿಭಾಗಾಧಿಕಾರಿ ಅಬೀದ ಗದ್ಯಾಳ ಹೇಳಿದರು.

ಪಟ್ಟಣದ ಪೋಲಿಸ್ ಪರೇಡ್ ಮೈದಾನದಲ್ಲಿ ತಾಲೂಕಾ ಆಡಳಿತ ವತಿಯಿಂದ ನಡೆದ 68 ನೆಯ ಕರ್ನಾಟಕ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡುತ್ತಿದ್ದರು.

ಉಪನ್ಯಾಸ ನೀಡಿ ಮಾತನಾಡಿದ ಕಲಬುರಗಿ ಶರಣ ಬಸವೇಶ್ವರ ವಿವಿ ಕನ್ನಡ ಅಧ್ಯಯನ ಪೀಠದ ಮತ್ತು ಸಂಶೋಧನಾ ವಿಭಾಗದ ಸಹಾಯಕ ಪ್ರಾಧ್ಯಾಪಕ ನಾನಾಸಾಹೇಬ ಹಚಡದ ಮಾತನಾಡಿ, ಭಾರತದಲ್ಲಿ ಕನ್ನಡ 21 ನೆಯ ಸ್ಥಾನದಲ್ಲಿದೆ. ನಮ್ಮ ನಾಡು ಕರ್ನಾಟಕವೆಂದು ಮರುನಾಮಕರಣಗೊಂಡು 50 ವರ್ಷಗಳು ಕಳೆದಿವೆ. ಕರ್ನಾಟಕದ ಏಕೀಕರಣಕ್ಕೆ ಅನೇಕ ಸಾಹಿತಿಗಳು, ಕಲಾವಿಧರು, ಚಿಂತಕರು, ಸಂಶೋಧಕರು, ಸಂಘ ಸಂಸ್ಥೆಗಳು ಬೆಂಬಲಿಸಿ 1973 ನ. 1 ರಂದು ಕರ್ನಾಟಕ ಎಂದು ನಾಮಕರಣ ಮಾಡಿದ್ದು,ದೇಶದಲ್ಲೇ ಅತೀ ಹೆಚ್ಚು ಜ್ಞಾನಪೀಠ ಪ್ರಶಸ್ತಿಗೆ ಪಾತ್ರವಾದಂಥ ಭಾಷೆಯು ಸಮಗ್ರ ಅಭಿವೃದ್ಧಿಯಾಗಬೇಕಾಗಿದೆ. ಕನ್ನಡದ ಹಿತವನ್ನು ಒಡಲಲ್ಲಿಟ್ಟುಕೊಂಡು ಕನ್ನಡ ಭಾಷಾ ಮತ್ತು ಸಮಗ್ರ ಅಭಿವೃದ್ಧಿ ನೀತಿಯ ಬಗ್ಗೆ ನಿರ್ಲಕ್ಷ □□ ತೋರದೇ ಸಮರ್ಪಕವಾಗಿ ಅನುಷ್ಠಾನಗೊಳಿಸುವ ಕಾರ್ಯವಾಗಲಿ, ಕನ್ನಡ ಭಾಷಾ ಪ್ರೇಮ ಆಡಳಿತ ಯಂತ್ರಕ್ಕೆ ಒಳ್ಳೆಯ ವಿಚಾರವಾಗಲಿ ಎಂದರು.

ಕ್ಷೇತ್ರಶಿಕ್ಷಣಾಧಿಕಾರಿ ಟಿ. ಎಸ್.ಅಲಗೂರ, ಬಸವರಾಜ ಗೋರನಾಳ, ಶಿಕ್ಷಕಿ ಪಿ.ಎಸ್.ಹೂಗಾರ ಮಾತನಾಡಿದರು.

ವೇದಿಕೆಯ ಮೇಲೆ ತಹಸೀಲ್ದಾರ ಬಿ.ಎಸ್.ಕಡಕಬಾವಿ, ಇಒ ಬಾಬುರಾವ ರಾಠೋಡ, ಪೋಲಿಸ್ ಉಪಾಧೀಕ್ಷಕರು ಎಚ್.ಎನ್.ಜಗದೀಶ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಹಂಗರಗಿ ವೇದಿಕೆಯ ಮೇಲಿದ್ದರು.

ಸಮಾರಂಭದಲ್ಲಿ ಕರವೇ ಅಧ್ಯಕ್ಷ ಶಿವು ಮಲಕಗೊಂಡ, ಬಾಳು ಮುಳಜಿ, ಹೆಸ್ಕಾಂ ಎಇಇ ಎಸ್.ಆರ್. ಮೆಂಡೆದಾರ, ಎಸ್.ಆರ್.ರುದ್ರವಾಡಿ, ಎ.ಎಸ್.ಲಾಳಸೇರಿ, ಬಿ.ಜೆ.ಇಂಡಿ, ಕೃಷಿ ಅಧಿಕಾರಿ ಮಲ್ಲಿಕಾರ್ಜುನ ಏವೂರ, ಉಪ ತಹಸೀಲ್ದಾರ ಧನಪಾಲಶೆಟ್ಟಿ, ಚಂದ್ರಕಾಂತ ಕರೂರ, ಪುರಸಭೆ ಸದಸ್ಯ ಅನೀಲಗೌಡ ಬಿರಾದಾರ ಮತ್ತಿತರಿದ್ದರು.

ಹಿರಿಯ ಸಾಹಿತಿ ಸಂಶೋಧಕ ಡಿ.ಎಸ್.ಅಕ್ಕಿ ಮತ್ತು ನಾನಾಸಾಹೇಬ ಹಚಡದ ಇವರನ್ನು ಸನ್ಮಾನಿಸಲಾಯಿತು.

# ಕನ್ನಡವನ್ನು ಹೃದಯದ ಭಾಷೆಯಾಗಿಸೋಣ :ಡಾ.ಹಾದಿಮನಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪಟ್ಟಣದ ಹೊರವಲಯದ ಲೊಯೋಲ ಶಾಲೆಯಲ್ಲಿ 68 ನೆಯ ಕನ್ನಡ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಯಿತು.

ಸಮಾರಂಭದ ಮುಖ್ಯ ಅತಿಥಿ ಡಾ. ಸಮೀರ ಹಾದಿಮನಿ ಮಾತನಾಡಿ, ಕನ್ನಡ ಭಾಷೆಗೆ ಸುಮಾರು 2000 ವರ್ಷಗಳ ಸುಧೀರ್ಘ ಇತಿಹಾಸವಿದೆ. ಆಲೂರು ವೆಂಕಟರಾಯರಂತಹ ಅನೇಕ ಮಹನೀಯರ ಹೋರಾಟದ ಫಲವಾಗಿ ವಿವಿಧ ಪ್ರಾಂತಗಳಲ್ಲಿ ಹರಿದು ಹಂಚಿ ಹೋಗಿದ್ದ ಕನ್ನಡಿಗರೆಲ್ಲ ಒಂದಾದರು.1956 ನವೆಂಬರ್ 1 ರಂದು ಏಕೀಕರಣಗೊಂಡ ಕನ್ನಡ ನಾಡಿಗೆ ಮೈಸೂರು ರಾಜ್ಯ ಎಂದು ನಾಮಕರಣ ಮಾಡಲಾಯಿತು. 1973 ನವೆಂಬರ್ 1 ರಂದು ಕರ್ನಾಟಕ ಎಂದು ಮರು ನಾಮಕರಣ ಮಾಡಲಾಯಿತು. ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿ 50 ವರ್ಷ ತುಂಬಿದ ಸುವರ್ಣ ಸಂದರ್ಭದಲ್ಲಿ ನಾವಿದ್ದೇವೆ. ಕನ್ನಡ ಸುವರ್ಣ ಸಂಭ್ರಮದಲ್ಲಿರುವ ನಾವು ಕನ್ನಡ ನಾಡು ನುಡಿಯ ಬೆಳವಣಿಗೆಗಾಗಿ ಕಂಕಣಭದ್ಧರಾಗಿ ನಿಲ್ಲೋಣ. ಕನ್ನಡವನ್ನು ಹೃದಯದ ಭಾಷೆಯಾಗಿ ಬೆಳೆಸೋಣ ಎಂದು ಹೇಳಿದರು.





ಇನ್ನೋರ್ವ ಅತಿಥಿ ದಾನಪ್ಪಗೌಡ ಚನಗೊಂಡ ನ್ಯಾಯವಾದಿಗಳು ಮಾತನಾಡಿ, ಕನ್ನಡ ನಾಡು ವೀರರ, ಶೂರರ, ಧೀರರ ನಾಡು. ಶ್ರೀಗಂಧದ ಬೀಡು. ಉದಾತ್ತ ಸಂಸ್ಕೃತಿಯನ್ನು ಹೊಂದಿದ ನಾಡು. ಇಂತಹ ನಾಡಿನ ಹಿರಿಮೆ ಗರಿಮೆಯನ್ನು ಉಳಿಸಿ ಬೆಳೆಸುವಂತಹ ಘನವಂತ ವ್ಯಕ್ತಿಗಳು ನಾವಾಗೋಣ ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆ ಅಲಂಕ-ರಿಸಿದ ಫಾದರ್ ಜೀವನ ಡಿಸೋಜ ಎಸ್ ಜೆ ಮಾತನಾಡಿ, ಕನ್ನಡ ನಾಡು ಸರ್ವ ಧರ್ಮೀಯರ ನಾಡು, ಸರ್ವ ಜನಾಂಗದ ಶಾಂತಿಯ ತೋಟ. ಕನ್ನಡಿಗರು ಸಜ್ಜನ-ರಿಗೆ ಸಜ್ಜನರಾಗಿ, ದುರ್ಜನರಿಗೆ ದುರ್ಜನರಾಗಿ ವಿಶ್ವದಲ್ಲಿ ತಮ್ಮದೇ ಆದ ಛಾಪು ಮೂಡಿಸಿದವರು.12ನೇ ಶತಮಾನದ ಶರಣರು ಕನ್ನಡಕ್ಕೆ ವಿಶ್ವ ಮಟ್ಟದಲ್ಲಿ ಸ್ಥಾನಮಾನವನ್ನು ತಂದುಕೊಟ್ಟ ಕೀರ್ತಿ ಅವರದು. ಕನ್ನಡಕ್ಕೆ ಅತಿ ಹೆಚ್ಚು ಜ್ಞಾನಪೀಠ ಪ್ರಶಸ್ತಿಗಳು ದೊರೆತಿವೆ. ಇಂತಹ ಕನ್ನಡದ ದೀಪ ಮನೆ ಮನಗಳಲ್ಲಿ ಬೆಳಗಲಿ ಎಂದು ಹೇಳಿದರು. ಬಸವಣ್ಣ, ಸರ್ವಜ್ಞ, ಸಂಗೊಳ್ಳಿ ರಾಯಣ್ಣ,ಕಿತ್ತೂರು ಚೆನ್ನಮ್ಮ, ಒನಕೆ ಓಬವ್ವ ಮುಂತಾದ ಕನ್ನಡ ನಾಡಿನ ಮಹಾಪುರುಷರ ವೇಷ ಧರಿಸಿದ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಗಮನ ಸೆಳೆದರು. ವಿದ್ಯಾರ್ಥಿಗಳು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಮೂಲಕ ಮನರಂಜನೆ ನೀಡಿದರು.

ವೇದಿಕೆಯ ಮೇಲೆ ಶಾಲಾ ಪ್ರಾಚಾರ್ಯರಾದ ಫಾದರ್ ಲ್ಯಾನ್ಸಿ ಫರ್ನಾಂಡಿಸ್, ಉಪ ಪ್ರಾಂಶುಪಾಲೆಯರಾದ ಸಿಸ್ಟರ್, ಸೋಫಿಯಾ, ಕನ್ನಡ ಸಂಘದ ಕಾರ್ಯದರ್ಶಿ ಸಿದ್ದಪ್ಪ ಎಂ ಹಾಗೂ ಶ್ರೀಮತಿ ಫಾತಿಮಾ ಶಿಕ್ಷಕಿಯರು ಉಪಸ್ಥಿತರಿದ್ದರು.

ಶಿಕ್ಷಕರಾದ ಸಿದ್ದಪ್ಪ, ಶ್ರೀಮತಿ ಮಂಜುಳಾ ನಿರೂಪಿಸಿ, ಸ್ವಾಗತಿಸಿದರು. ಶ್ರೀಮತಿ ಫಾತಿಮಾ ವಂದಿಸಿದರು

# ಎಂಐಎಸ್ ಶಿಕ್ಷಣ ಸಂಸ್ಥೆಯಲ್ಲಿ ರಾಜ್ಯೋತ್ಸವ



**ಉದಯರಶ್ಮಿ ನ್ಯೂಸ್**

ಚಡಚಣ: ಪಟ್ಟಣದ ಎಂಇ-ಎಸ್ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಬುಧವಾರ ಕನ್ನಡ ರಾಜ್ಯೋತ್ಸವ ದಿನವನ್ನು ಆಚರಿಸಲಾಯಿತು.

ಈ ಸಂದರ್ಭದಲ್ಲಿ ಬೋಧಕ,ಬೋಧಕೇತರ ಮತ್ತು ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು

**ಉದಯರಶ್ಮಿ ದಿನಪತ್ರಿಕೆ**




ಜಯ್ ನುಡಿ

● ಜಯಶ್ರೀ.ಜೆ.ಅಬ್ಬಿಗೇರಿ
ಇಂಗ್ಲೀಷ್ ಉಪನ್ಯಾಸಕರು, ಬೆಳಗಾವಿ
9449234142

ಕನ್ನಡದ ಪ್ರಮುಖ ಸಾಹಿತಿಗಳಲ್ಲೊಬ್ಬರಾದ ಹುಯಿಲಗೋಳ ನಾರಾಯಣ-ರ ಕನ್ನಡದ ಲೇಖನಿಯಿಂದ ಹೊರ ಹೊಮ್ಮಿದ ಕರ್ನಾಟಕದ ನಾಡಗೀತೆಯೆನಿಸಿದ "ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು" ರಾಷ್ಟಕವಿ ಕುವೆಂಪು ವಿರಚಿತ ಜೈ ಭಾರತ ಜನನಿಯ ತನುಜಾತೆ, ಎಲ್ಲಾದರೂ ಎಂತಾದರೂ ಇರು, ವರಕವಿ ಬೇಂದ್ರೆಯವರ ಒಂದೇ ಒಂದೇ ಒಂದೇ ಕರ್ನಾಟಕ ಒಂದೇ, ಡಿ ಎಸ್ ಕರ್ಕಿಯವರ ಹಚ್ಚೆವು ಕನ್ನಡದ ದೀಪ. ಕೆ ಎಸ್ ನಿಸ್ಸಾರ ಅಹ್ಮದರ ನಿತ್ಯೋತ್ಸವದ ಗೀತೆಗಳು ನವಂಬರ್ ತಿಂಗಳಲ್ಲಿ ಮಾತ್ರ ಕನ್ನಡಿಗರ ಕಿವಿ ಮನಗಳನ್ನು ತಂಪಾಗಿಸುವ ಬೇಡಿಕೆಯನ್ನು ಹೆಚ್ಚಿಸಿಕೊಳ್ಳುತ್ತಿವೆ. ಕನ್ನಡಮ್ಮನ ಮುದ್ದು ಕಂದಮ್ಮಗಳಾದ ನಾವು ನಿರಭಿಮಾನಿಗಳಾಗದಿರಲಿ ಎಂದು ಹಿರಿಯ ಸಾಹಿತಿಗಳು ನಮ್ಮಲ್ಲಿ ಪ್ರೇರಕ ಶಕ್ತಿಯಂತೆ ಇಂಥ ಸಾವಿರಾರು ಗೀತೆಗಳನ್ನು ಕಾಣಿಕೆಯಾಗಿ ನೀಡಿದ್ದಾರೆ. ಕನ್ನಡಮ್ಮನ ಏಳ್ಗೆಯನ್ನು ಬಯಸಿದ ಅನೇಕ ಚಿಂತಕರು ನಾಡನ್ನು ಸುಭದ್ರವಾಗಿ ಕಟ್ಟೋದು ಹೇಗೆ? ಕಾಯೋದು ಹೇಗೆ? ಎನ್ನುವ ಚಿತ್ರವನ್ನು ನಮ್ಮ ಕೈಗಿತ್ತು ತೆರಳಿದ್ದಾರೆ. ಆದರೆ ನಾವಿಂದು ಪರಭಾಷೆಗಳ ವ್ಯಾಮೋಹಕ್ಕೆ ಬಲಿಯಾಗಿ ನಾಡು ನುಡಿಯನ್ನು ಪ್ರಾಮಾಣಿಕ ಕಾಳಜಿಯಿಂದ ರಕ್ಷಿಸುವ ಆದ್ಯ ಕರ್ತವ್ಯದಿಂದ ದೂರ ಸರಿಯುತ್ತಿದ್ದೇವೆ ಎಂಬುದು ಸ್ಪಷ್ಟವಾಗಿ ಎದ್ದು ಕಾಣುತ್ತಿದೆ.

ಸಾವಿರಾರು ವರ್ಷಗಳ ಸುದೀರ್ಘ ಇತಿಹಾಸ ಹೊಂದಿದ ಕನ್ನಡ ಭಾಷೆ ಜಾಗತಿಕವಾಗಿ ಪ್ರಸಿದ್ಧಿಯನ್ನು ಪಡೆದ ಭಾಷೆಯಾಗಿದೆ. ಕನ್ನಡದಲ್ಲಿರುವ ವಚನ, ರಗಳೆ ಸಾಹಿತ್ಯದಂಥ ಪ್ರಕಾರಗಳು ವಿಶ್ವದ ಯಾವುದೇ ಭಾಷೆಯಲ್ಲಿಲ್ಲ. ಶ್ರೀಮಂತ ಸಾಹಿತ್ಯವನ್ನು ಹೊಂದಿದ ಭಾಷೆ ನಮ್ಮದು. ಕನ್ನಡಿಗರು ಭಾಷೆಯಲ್ಲಿ ಕ್ರಿಯಾಶೀಲರಾಗಿ ಕಟ್ಟಿದ ಸಾಹಿತ್ಯದ ಸಿರಿಯನ್ನು ಕಂಡು ಇತರ ಭಾಷಿಕರು ಮೂಕ ವಿಸ್ಮಿತರಾಗಿದ್ದಾರೆ. ಆದ-ರೆ ಇಂದು ಈ ಭಾಷೆಯನ್ನು ಉಳಿಸಲು ಗಡಿನಾಡಿನಲ್ಲಷ್ಟೇ ಅಲ್ಲ ನಡು ನಾಡಿನಲ್ಲೂ ತೀವ್ರವಾಗಿ ಹೋರಾಟ ನಡೆಸಲೇಬೇಕಾದ ದುಸ್ಥಿತಿ ನಿರ್ಮಾಣವಾಗಿದೆ. ನಾಡು ನುಡಿಗೆ ಮಸಿ ಬಳಿಯುವವರನ್ನು ಸದೆ ಬಡಿಯಬೇಕಾಗಿದೆ. ಹೊರಗಿನ ಶತ್ರುಗಳನ್ನು ಮಟ್ಟ ಹಾಕುವುದು ಸರಳ. ಒಳಗಿನ ಶತ್ರುಗಳನ್ನು ನಿರ್ನಾಮ ಮಾಡುವುದು ಸುಲಭದ ಮಾತಲ್ಲ. ಕನ್ನಡತನವನ್ನು ಜತನದಿಂದ ಕಾಪಿಟ್ಟುಕೊಳ್ಳಬೇಕೆಂಬ ಸದುದ್ದೇಶದಿಂದ ಆರಂಭಗೊಂಡ ಹೋರಾಟಗಳು ಈಗೀಗ ಚೀರಾಟಗಳಾಗಿ ಬದಲಾಗಿವೆ. ಓಣಿ ಓಣಿಯಲ್ಲೂ ಸಂಘಟನೆಗಳು ಹುಟ್ಟಿಕೊಂಡು ಬಾಯಲ್ಲಿ ಮಾತ್ರ ಜೈಕಾರ ಕೂಗುತ್ತ ನಿಜವಾದ ಸಂಘಟನೆಗಳ ಕಾರ್ಯ ವೈಖ-ರಿಗೆ ಅಸಹ್ಯ ಹುಟ್ಟಿಸುತ್ತಿವೆ. ಅಪ್ಪಟ ಕನ್ನಡ ಭಕ್ತರಲ್ಲಿ ಕನ್ನಡ ಪರ ನಿಲುವನ್ನು ಹೊಂದಿದ ನಿಜವಾದ ಅಹವಾಲುಗಳಿವೆ. ಅವುಗಳಿಗಾಗಿ ಉಗ್ರ ಹೋರಾಟ ನಡೆಸುವ ಛಲದ ಕೆಚ್ಚೆದೆಯೂ ಇದೆ. ನಮ್ಮನ್ನು ನಮ್ಮವ-ರಿಂದ ರಕ್ಷಿಸಿಕೊಂಡು ಬೆಳೆಯಲು ಇಷ್ಟೆಲ್ಲ ಹೋರಾಟಗಳ ಅಗತ್ಯತೆ ಕಾಡುತ್ತಿರುವುದು ನಿಜಕ್ಕೂ ದುರಂತದ ಸಂಗತಿ. ನಾಡಿನ ನೆಲ ಜಲದ






ರಕ್ಷಣೆಯ ಹೆಸರಿನಲ್ಲಿ ದುಃಖ ಆಕ್ರೋಶ ಆವೇಗ ದೋಂಬಿ ಹಿಂಸಾಚಾರವನ್ನು ಎಸಗಿ ಗಲಭೆ ಕಲ್ಲು ತೂರಾಟಗಳಿಂದ ಸಾರ್ವಜನಿಕ ಆಸ್ತಿ ಪಾಸ್ತಿಗಳನ್ನು ನಾಶಗೊಳಿಸುವುದು ಸಾಮಾನ್ಯವಾಗಿ ಬಿಟ್ಟಿದೆ.

ನಾಡು ನುಡಿ ಸಂಸ್ಕೃತಿಯ ಉಳಿವಿಗೆ ಬೆಳವಣಿಗೆಗೆ ನಮ್ಮ ಮಕ್ಕಳಲ್ಲಿ ಅಭಿಮಾನ ಬಿತ್ತರಿಸುವ ಕೆಲಸ ಇಂದು ನಮ್ಮಿಂದ ಆಗಬೇಕಿದೆ. ಆದರೆ ಈ ಹೊಣೆಗಾರಿಕೆ ಅಲ್ಲಲ್ಲಿ ಚೂರು ಪಾರು ಎನ್ನುವಷ್ಟು ಮಾತ್ರ ನಡೆಯುತ್ತಿರುವುದು ಖೇದವೇ ಸರಿ. ನವಂಬರ್ ತಿಂಗಳಲ್ಲಿ ಮಾತ್ರ ನಾಡ ಪ್ರೇಮ ಭಾಷಾ ಪ್ರೀತಿಯನ್ನು ವ್ಯಕ್ತಪಡಿಸುವವರ ಸಂಖ್ಯೆ ಹೆಚ್ಚುತ್ತಲೇ ಇದೆ. ನಾಡು ನುಡಿಯ ಅಭಿವೃದ್ಧಿಗೆ ಕಾವಲು ಸಮಿತಿಗಳನ್ನು ಅಭಿವೃದ್ಧಿ ಪ್ರಾಧಿಕಾರಗಳನ್ನು ಹುಟ್ಟು ಹಾಕಿದರೆ ಸಾಲದು. ಅದಕ್ಕೆ ನಿರಂತರವಾದ ತಾಲೀಮು ಕೌಟುಂಬಿಕವಾಗಿ ಸಾಮಾಜಿಕವಾಗಿಯೂ ನಡೆಯುವಂತೆ ಅವಕಾಶಗಳನ್ನು ಕಲ್ಪಿಸಬೇಕಿದೆ. ಕನ್ನಡದ ಸ್ಥಾನಮಾನ ಇನ್ನಷ್ಟು ಎತ್ತರಕ್ಕೆ ಏರಲು ಬಹಳಷ್ಟು ಸವಾಲುಗಳನ್ನು ಎದುರಿಸಬೇಕಿದೆ. ಕನ್ನಡಿಗರಿಗೆ ಇದು ಕಷ್ಟ ಸಾಧ್ಯವಾದ ಸಂಗತಿಯಾಗಿದೆ. ಅದಕ್ಕೆ ಪೂರಕವಾದ ವಾತಾವರಣ ಸೃಷ್ಟಿಸಲೇ ಬೇಕಿದೆ. ಗಂಡು ಮೆಟ್ಟಿದ ನಾಡು ಕಸ್ತೂರಿಯ ಬೀಡು ಎಂದೆಲ್ಲ ಅಪಾರ ಕೀರ್ತಿ ಗಳಿಸಿದ ಕನ್ನಡಮ್ಮ ಇಂದು ತನ್ನ ಮಕ್ಕಳಿಂದಲೇ ಅಲಕ್ಷ □□ಕ್ಕೆ ಒಳಗಾಗಿದ್ದಾಳೆ. ಇಂದಿನ ಭಾಷಾ ಜಗತ್ತಿನಲ್ಲಿ ಕನ್ನಡಕ್ಕೆ ಶಾಸ್ತ್ರೀಯ ಭಾಷೆಯ ಸ್ಥಾನಮಾನ ದೊರೆತಿದೆ. ಹಾಗೆಂದು ಪೂರ್ತಿಯಾಗಿ ಎಲ್ಲವೂ ಸುಧಾರಿಸಿದೆ ಎಂದರ್ಥವಲ್ಲ.

ಬದಲಾವಣೆಯ ಭರಾಟೆಯಲ್ಲಿ ಕನ್ನಡಿಗರು ಕನ್ನಡವನ್ನು ಧಿಕ್ಕರಿಸಿ ಇಂಗ್ಲೀಷ್ ಜಾಲಕ್ಕೆ ಬಿದ್ದು ಇಂಗ್ಲೀಷ್ ಕಡೆಗೆ ಹೆಚ್ಚು ಕುತೂಹಲ ತಾಳುತ್ತಿದ್ದಾರೆ. ಅಂಗ್ಲ ಭಾಷೆಯು



ನಾಡಿನ ತುಂಬೆಲ್ಲ ಪಾರುಪತ್ಯ ಮೆರೆಯುತ್ತಿದೆ. ಈ ಹಿನ್ನೆಲೆಯಲ್ಲಿ ಹೇಳುವುದಾದರೆ ಕನ್ನಡತನವನ್ನು ಮುನ್ನಡೆಸಲು ಮುಂದಾಗಬೇಕಿದೆ. ಆಡಳಿತ ವ್ಯವಸ್ಥೆಯಲ್ಲಿ ಹಣದಾಹದ ಬೇಳೆ ಬೇಯಿಸಿಕೊಳ್ಳುವ ಜನ ನಮ್ಮನ್ನು ಮಾನಸಿಕವಾಗಿ ಸಾಕಷ್ಟು ಕುಗ್ಗಿಸಲು ಪ್ರಯತ್ನಿಸುತ್ತಿದ್ದಾರೆ. ಬೆನ್ನು ಸವರುತ್ತ ಚೂರಿ ಇರಿಯುವ ಇವರನ್ನೆಲ್ಲ ಸವಾಲಾಗಿ ಪರಿಗಣಿಸಿಬೇಕು. ಅನ್ಯ ಕಾರಣಗಳಿಂದ ಅನ್ಯ ಭಾಷಿಕರ ವಲಸೆ ನಿರಂತರವಾಗಿ ನಡೆದೇ ಇದೆ. ನಮ್ಮಿಂದ ಬೇಳೆ ಬೇಯಿಸಿಕೊಂಡು ಬೆನ್ನಹಿಂದೆ ನಮ್ಮನ್ನು ಚುಚ್ಚು ಮಾತುಗಳಿಂದ ಅವಮಾನಿಸುವ ಈ ಅನ್ಯ ಭಾಷಿಕರನ್ನು ಸಹಿಸಿ ಹೆಜ್ಜೆ ಹಿಂದಿಡುವ ಹಾಗಿಲ್ಲ. ಅವರ ಚುಚ್ಚು ಮಾತು ಅವಮಾನಗಳನ್ನೇ ನಮ್ಮ ಶಕ್ತಿಯನ್ನಾಗಿಸಿ ಎಲ್ಲವನ್ನೂ ಸಹಿಸಿಯೂ ಮುಂದುವರೆಯುವ ಛಲ ಹೊತ್ತು ಇಷ್ಟು ದೂರವಾದರೂ ನಡೆದು ಬಂದೆವಲ್ಲ ಎಂದು ಅಭಿಮಾನದಿಂದ ಹೇಳುವ ನಮ್ಮ ಅನೇಕ ಕನ್ನಡ ಮನಸ್ಸುಗಳು ಗಟ್ಟಿಯಾಗಿವೆ. ಅಂಥ-ವರೊಂದಿಗೆ ಕೈ ಜೋಡಿಸುವ ಹೊಣೆ ನಮ್ಮದಾಗಿದೆ.

ಗುರಿಯೆಡಗಿನ ದಾರಿ ಸ್ಪಷ್ಟವಾಗಿವೆ. ಎಂದು ಕೆಲ ಅಪ್ಪಟ ಕನ್ನಡ ಸಂಘದ ಸದಸ್ಯರು ಆತ್ಮವಿಶಾಸದಿಂದ ಗೆಲುವಿನ ನಗೆಯೊಂದಿಗೆ ಹೇಳುತ್ತಾರೆ. ನಮ್ಮ ಮುಂದಿನ ಪೀಳಿಗೆಗೆ ಸುಭದ್ರ ನಾಡನ್ನು ಕೈಗಿಡಲು ಶ್ರಮಿಸುತ್ತಿರುವ ಇಂಥ-ವರಿಗೆಲ್ಲ ನಮ್ಮ ಸಹಕಾರ ಎಷ್ಟರ ಮಟ್ಟಿಗಿದೆ ಎಂಬ ಪ್ರಶ್ನೆ ಸಹಜವಾಗಿ ಹುಟ್ಟಿಕೊಳ್ಳುತ್ತದೆ. ಈ ಪ್ರಶ್ನೆಯನ್ನು ನಾಡು ನುಡಿ ರಕ್ಷಣೆಗೆ ದುಡಿಯುವ ಮನಗಳ ಮುಂದಿಟ್ಟರೆ ಇವೆಲ್ಲ ಸಮಸ್ಯೆಗಳಲ್ಲವೇ ಅಲ್ಲ ಕನ್ನಡ ತಾಯಿಯ ಸೇವೆಯೇ ನಮ್ಮ ಬಾಳಿನ ಪರಮ ಗುರಿಯೆಂದು



ಒಪ್ಪಿಕೊಂಡಿದ್ದೇವೆ. ಮತ್ತು ಅದನ್ನು ಕೊನೆಯುಸಿರುವವರೆಗೂ ನಿಭಾಯಿಸುತ್ತೇವೆ.ಅಲ್ಲದೇ ಕನ್ನಡ ಬಳಗಕ್ಕೆ ಜನರ ಪ್ರತಿಕ್ರಿಯೆಯೇ ದೊಡ್ಡ ಆಧಾರ ಎನ್ನುತ್ತಾರೆ ತಮ್ಮ ಮುಂದಿನ ಹೆಜ್ಜೆಯ ಬಗ್ಗೆಯೂ ಸ್ಪಷ್ಟತೆ ಹೊಂದಿರುವ ಸಂಘಟಕರು. ಇಂಥ ಸಂಘಟನೆಗಳ ಬಲವನ್ನು ನಾವೆಲ್ಲ ಕೂಡಿ ಹೆಚ್ಚಸಬೇಕು. ಕಳೆದು ಹೋದ ಗತ ವೈಭವದ ದಿನಗಳನ್ನು ಮರಳಿ ತರಲು ಕಂಕಣಬದ್ದರಾಗಬೇಕು. ಕನ್ನಡ ನಾಡಿನ ನೈಸರ್ಗಿಕ ಸಂಪತ್ತು ಖನಿಜ ಸಂಪತ್ತು ವಾಣಿಜ್ಯೋದ್ಯಮಗಳೆಲ್ಲ ಕನ್ನಡಿಗರ ಪಾಲಿಗೆ ದಕ್ಕದೇ ಅನ್ಯರ ಪಾಲಾಗುತ್ತಿರುವುದು ವಿಷಾದದ ಸಂಗತಿ. ಕನ್ನಡ ನಾಡು ಕರ್ನಾಟಕ ಎಂದು ಹೊಸ ನಾಮಕರಣ ಮಾಡಿಕೊಂಡು ಎಷ್ಟೋ ದಶಕಗಳು ಕಳೆದರೂ ಹುಯಿಲಗೋಳ ನಾರಾಯಣರ ಕವಿ ಮನದ ಬಲವಾದ ಆಶಯವನ್ನು ಈಡೇರಿಸಲಾಗದೇ ಉದಯವಾಗಲಿ ನಮ್ಮ ಚೆಲುವ ಕನ್ನಡ ನಾಡು ಎಂದೇ ಹಾಡುವಂತಾಗಿದೆ. ಇನ್ನಾದರೂ ಕನ್ನಡತನದ ಪ್ರಜ್ಞೆಯನ್ನು ಹೆಚ್ಚಿಸಿಕೊಂಡು ಚೆಲುವ ಕನ್ನಡ ನಾಡನ್ನು ಕಟ್ಟೋಣ. ಕನ್ನಡದ ಕಸ್ತೂರಿಯ ಕಂಪನ್ನು ಮತ್ತಷ್ಟು ಮಗದಷ್ಟು ವಿಶ್ವದ ಜೀವಾಂತರಂಗದಲಿ ಪಸರಿಸೋಣ.

# ಪಾಣಿಸಾಹೇಬ ಜಾತ್ರೆ ಭಾವೈಕ್ಯತೆಯ ಪ್ರತೀಕ :ಸಚಿವ ಎಂ.ಬಿ.ಪಾಟೀಲ

ಉದಯರಶ್ಮಿ ನ್ಯೂಸ್



ವಿಜಯಪುರ: ಭಾವೈಕ್ಯತೆಯ ಪ್ರತೀಕವಾಗಿರುವ ಬಾಬಾನಗರ ಪಾಣಿಸಾಹೇಬ ಜಾತ್ರೆ ಎಲ್ಲ-ರಿಗೂ ಮಾದರಿಯಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.

ಬುಧವಾರ ತಿಕೋಟಾ ತಾಲೂಕಿನ ಬಾಬಾನಗರದ ಹಜರತ ಬಾಬಾ ಪಾಣಿಸಾಹೇಬ ದರ್ಗಾ ಜಾತ್ರೆಯಲ್ಲಿ ಪಾಲ್ಗೊಂಡು ದೇವರ ಆಶೀರ್ವಾದ ಪಡೆದ ಬಳಿಕ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಪಾಣಿಸಾಹೇಬರ ಜಾತ್ರೆಗೆ ಭಕ್ತನಾಗಿ ಬಂದಿದ್ದೇನೆ. ಸರ್ವಜನಾಂಗದ ಗ್ರಾಮದೇವತೆ ಇದಾಗಿದೆ. ಎಲ್ಲ ಧರ್ಮ, ಜಾತಿಯವರು ಭಕ್ತಿ, ಶ್ರದ್ಧೆಯಿಂದ ನಡೆದುಕೊಳ್ಳುತ್ತಾರೆ. ಇದು ವಿಶ್ವಕ್ಕೆ ಮಾದರಿಯಾಗಿದೆ. ಇಲ್ಲಿ ಹಿಂದೂಗಳೂ ಕೂಡ ಹೆಚ್ಚಿನ ಸಂಖ್ಯೆಯಲ್ಲಿ ನಡೆದುಕೊಳ್ಳುವುದು ಕೋಮು ಸಾಮರಸ್ಯಕ್ಕೆ ಸಾಕ್ಷಿಯಾಗಿದೆ. ಪಾಣಿಸಾಹೇಬ ದೇವರು ನಮಗೆ ಜನಸೇವೆಗೆ ನಮಗೆ ಅವಕಾಶ ನೀಡಿದ್ದು, ಮುಂಬರುವ ದಿನಗಳಲ್ಲಿ ಎಲ್ಲ ಕಡೆ ಸುಖ, ಶಾಂತಿ, ಸಮೃದ್ಧಿ ನೀಡಲಿ. ಮತದಾರರು ಸುಖದಿಂದ ಇದ್ದರೆ ನಾವು ನೆಮದಿಯಿಂದ ಇದ್ದಂತೆ ಎಂದು ಹೇಳಿದರು.

ಗ್ರಾಮದ ಮುಖಂಡ ಯಲ್ಲಾಲಿಂಗ ಹೊನವಾಡ ಮಾತನಾಡಿ, ಸಚಿವ ಎಂ. ಬಿ. ಪಾಟೀಲ ಅವರು ಕೇವಲ ನೀರಾವರಿಯನ್ನಷ್ಟೇ ಮಾಡಿಲ್ಲ. ಜನರ ಧಾರ್ಮಿಕ ಭಾವನೆಗಳಿಗೂ ಬೆಲೆ ನೀಡಿ ಎಲ್ಲ ಧರ್ಮದವರ ದೇವಸ್ಥಾನ, ದರ್ಗಾ ಸೇರಿದಂತೆ ದಾರ್ಮಿಕ ಕ್ಷೇತ್ರಗಳ ಅಭಿವೃದ್ಧಿಗೂ ಸಹಾಯ ಹಸ್ತ ಚಾಚಿದ್ದಾರೆ. ಅವರು ಈ ಭಾಗದಲ್ಲಿ ಮಾಡಿರುವ ಸಿಸಿ ರಸ್ತೆಗಳು, ನೀರಿನ ಸೌಲಭ್ಯದಿಂದ ದರ್ಗಾ ಜಾತ್ರೆಗೆ ಹೆಚ್ಚಿನ ಸಂಖ್ಯೆಯಲ್ಲಿ ಜನರು ಬರಲು ಅನುಕೂಲವಾಗಿದೆ. ಗ್ರಾ. ಪಂ. ನೆರವು ಸಿಕ್ಕಿದೆ. ಹಿಂದೂ-ಮುಸ್ಲಿಮರು ಸೇರಿಕೊಂಡು ಇಲ್ಲಿ ಮಾದರಿ ಜಾತ್ರೆ ಮಾಡುತ್ತಿದ್ದಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ತಿಕೋಟಾ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿದ್ದು ಗೌಡನವರ, ಕರೀಂ ಏಳಾಪುರ, ಅಕ್ಬರ ಮುಲ್ಲಾ, ಈರನಗೌಡ ರುದ್ರಗೌಡರ, ಅನೀಲ ಕಾಂಬಳೆ, ಸುಭಾಷ ಅಕ್ಕಿ, ಪ್ರಕಾಶ ಆಯಿತವಾಡ, ನೂರುದ್ದೀನ್ ಮುಲ್ಲಾ, ರಾಮಗೊಂಡ ಬಿರಾದಾರ, ಸಿದ್ದು ಪಿ. ಬಿರಾದಾರ, ಶಂಕರಗೌಡ ಬಿರಾದಾರ, ಸಿದ್ದಗೊಂಡ ರುದ್ರಗೌಡರ, ಗ್ರಾಮದ ಹಿರಿಯರು, ಯುವಕರು ಮುಂತಾದವರು ಉಪಸ್ಥಿತರಿದ್ದರು.

# ಮೂಳೆ ಕ್ಯಾನ್ಸರ್‌ನಿಂದ ನರಳುತ್ತಿರುವ ಬಾಲಕಿ ಚಿಕಿತ್ಸೆಗೆ ಬೇಕಿದೆ ನೆರವಿನ ಹಸ್ತ

ಉದಯರಶ್ಮಿ ನ್ಯೂಸ್

– ಸಂಪದಾ ಹಿರೇಮಠ



ನಿಡಗುಂದಿ: ಇಲ್ಲೊಂದು ಮನಕಲಕುವ ಸುದ್ದಿ. ಚಾಮರ ತಮ್ಮೆದುರಿಗಿದೆ. ಚಿಕ್ಕ ವಯಸ್ಸಿನ ಬಾಲಕಿಯೊಬ್ಬಳು ಇನ್ನಿಲ್ಲದ ನರಕಯಾತನೆ ಕ್ಷಣಕ್ಷಣವೂ ಅನುಭವಿಸಿ ಕಣ್ಣೀರಲ್ಲಿ ಉಸರಿಸುತ್ತಿದ್ದಾಳೆ. ಅವಳ ಬದುಕು ಅಯೋಮಯ. ಹೆತ್ತವರ ಕರುಳು ಕಿತ್ತಿ ಬರುವಂತಿ-ದೆ. ದೇವರ ಆಟದ ಮುಂದೆ ಕೈಚೆಲ್ಲಿ ಕುಳಿತಿದೆ. ಆ ಕುಟುಂಬ ! ಈಗೇನಿದ್ದರೂ ಮಾನವೀಯ ಮೌಲ್ಯ ಮೆರೆಯಬೇಕಾಗಿದೆ. ಹೃದಯವಂತರು ನೆರವಿಗೆ ಧಾವಿಸಬೇಕಾಗಿದೆ. ಆ ದೈವ ನಿರೀಕ್ಷೆಯೇ ಅವಳ ಪಾಲಿಗೆ ಹೊಸ ಬದುಕು ಕಲ್ಪಿಸಿ ಕೊಡಬಹುದೇನೋ...?

ಹಾಗಾದರೆ ಈ ಬರಹಗಳ ಮೇಲೆ ಒಮ್ಮೆ ಕಣ್ಣಾಡಿಸಿ. ಮನಸ್ಸು ಮಾನವೀಯತ್ತ ವಾಲಿದರೆ ಕೈಲಾದ ಮಟ್ಟಿಗೆ ನೆರವಿನ ಹಸ್ತ ಚಾಚಿ. ಪುಣ್ಯದ ಫಲದಲೊಂದು ಪರೋಪಕಾರದ ನೆಮ್ಮದಿಯ ಸಂತೃಪ್ತ ಭಾವ ಕಾಣಿಯಷ್ಟೇ.!

ಮಗುವಿನ ಕಥೆ ವ್ಯಥೆ ಹೀಗಿದೆ..

ನೋಡಿ ! ನಿಡಗುಂದಿ ತಾಲ್ಲೂಕಿನ ಯಲ್ಲಮ್ಮನ ಬೂದಿಹಾಳ ಗ್ರಾಮದ 14 ವರ್ಷದ ಬಾಲಕಿ ಮೂಳೆ ಕ್ಯಾನ್ಸರ್‌ನಿಂದ ಬಳಲುತ್ತಿದ್ದು, ತೀವ್ರ ನೋವಿನ ಯಾತನಾಮಯದಲ್ಲಿ ಜೀವನ ಸಾಗಿಸುತ್ತಿದ್ದಾಳೆ.

ಹಿಂದೆಯಷ್ಟೇ ತಂದೆ ಹನುಮಂತ ಕಿಡ್ನಿ ತೊಂದರೆಯಿಂದ ಮೃತಪಟ್ಟಿದ್ದು, ತಾಯಿ ಚಂದ್ರಕಲಾ ಕೂಲಿ ನಾಲಿ ಮಾಡಿ ಈ ಬಾಲಕಿಯ ಆರೈಕೆ ಮಾಡುತ್ತಿದ್ದಾಳೆ. ಯಾವುದೇ ಜಮೀನು ಇಲ್ಲ, ಮನೆ ಕೂಡಾ ಇಲ್ಲ. ಚಿಕ್ಕದಾದ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದಾರೆ.

ಕಳೆದ ವರ್ಷ 8 ನೇ ವರ್ಗದಲ್ಲಿದ್ದಾಗ ಸ್ನೇಹ ಸಮ್ಮಿಲನದಲ್ಲಿ ನೃತ್ಯವನ್ನು ಮಾಡಿದ್ದ ಈ ಬಾಲಕಿ ಓದಿನಲ್ಲಿಯೂ ಚುರುಕಾಗಿದ್ದಳು. ಈ ವರ್ಷ 9 ನೇ ವರ್ಗ ನಿಡಗುಂದಿಯ ಜಿವಿವಿಎಸ್ ಪ್ರೌಢಶಾಲೆಯಲ್ಲಿ ಈಕೆ ಕಲಿಯುತ್ತಿದ್ದಾಳೆ. ಕಳೆದ ಐದು ತಿಂಗಳ ಹಿಂದೆ ಸಣ್ಣದಾಗಿ ಆರಂಭಗೊಂಡ ಕಾಲು ನೋವು ಈಗ ಮೂಳೆ ಕ್ಯಾನ್ಸರ್ ಮಟ್ಟಕ್ಕೆ ಬೆಳೆದು ಬಂದಿದೆ. ಒಂದೊಂದೇ ಮೂಳೆಗಳ ಬೇನೆ ಆರಂಭಗೊಂಡಿದೆ. ಬಾಗಲಕೋಟೆ, ವಿಜಯಪುರದ ಸರ್ಕಾರಿ, ಖಾಸಗಿ ಆಸ್ಪತ್ರೆಯಲ್ಲಿ ಅನೇಕ ಬಾರಿ ತಪಾಸಣೆ ನಡೆಸಿದಾಗ, ಅದು ಮೂಳೆ ಕ್ಯಾನ್ಸರ್ ಪೂರ್ತಿ ಗುಣಮುಖರಾಗಲು ಹಲವು ಲಕ್ಷಗಳ ಹಣಕಾಸಿನ ಅಗತ್ಯವಿದೆ ಎಂದು ಖಾಸಗಿ ವೈದ್ಯರು ಹೇಳಿದ್ದಾರೆ. ಕನಿಷ್ಠ ನೋವು ರಹಿತ ಬದುಕು ಸಾಗಿಸಲಾದರೂ ಹಣಕಾಸಿನ ನೆರವಿನ ಆಸರೆ ಬೇಕಿದೆ. ಸಂಘ, ಸಂಸ್ಥೆ, ದಾನಿಗಳು ಈಕೆಯ ಸಹಾಯ ಹಾಗೂ ಆರೋಗ್ಯಕ್ಕೆ ನೆರವಾಗಲು ಈ ಕೆಳಕಂಡವರನ್ನು ಸಂಪರ್ಕಿಸಲು ತಾಯಿ ಚಂದ್ರಕಲಾ ವಿನಂತಿಸಿದ್ದಾರೆ.

ವಿಳಾಸ : ಚಂದ್ರಕಲಾ ಹನುಮಂತ ವಾಲೀಕಾರ, ಸಾ:ಯಲ್ಲಮ್ಮನಬೂದಿಹಾಳ, ತಾ: ನಿಡಗುಂದಿ, ಜಿ: ವಿಜಯಪುರ,

ಫೋನ್ ಪೇ ಸಂಖ್ಯೆ: 9699712590

ಸ್ಟೇಟ್ ಬ್ಯಾಂಕ್ ಆಫ್ ಇಂಡಿಂ-ಯಾದ ನಿಡಗುಂದಿ ಶಾಖೆಯ ಎಸ್.ಬಿ. ಖಾತೆ ಸಂಖ್ಯೆ: 41720274398

ಐಎಫ್ ಎಸ್ ಸಿ ಕೋಡ್: ಎಸ್ ಬಿಐಎನ್ 0002243

## ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಕನ್ನಡ ರಾಜ್ಯೋತ್ಸವ

# ಕನ್ನಡ ಕೇವಲ ಭಾಷೆಯಲ್ಲ ದೊಡ್ಡ ಶಕ್ತಿ :ಭಾಗೇಶ ಮುರಡಿ

ಉದಯರಶ್ಮಿ ನ್ಯೂಸ್




ವಿಜಯಪುರ: ಕನ್ನಡ ಕೇವಲ ಭಾಷೆಯಲ್ಲ ದೊಡ್ಡ ಶಕ್ತಿ. ಕನ್ನಡ ಭಾಷೆ ವಿಶ್ವದ ಮೂರನೇ ಅತ್ಯಂತ ಹಳೆಯ ಭಾಷೆ. ವಿಶ್ವದ ಸಾವಿರಾರು ಭಾಷೆಗಳಲ್ಲಿ ಓದಿದಂತೆ ಬರೆಯುವ, ಬರೆದಂತೆ ಓದುವ ಹಾಗೂ ವೈಜ್ಞಾನಿಕವಾಗಿ ಅಕ್ಷರಗಳನ್ನು ವಿಂಗಡಿಸಿದ ವಿಶ್ವದ ಏಕೈಕ ಭಾಷೆ ಕನ್ನಡವಾಗಿದೆ ಎಂದು ಹಾಸ್ಯ ಭಾಷಣಕಾರರು ಹಾಗೂ ಎಸ್ .ಬಿ ವಿಸ್ಡಮ್ ಕರಿಯರ್ ಅಕಾಡೆಮಿಯ ಕನ್ನಡ ಉಪನ್ಯಾಸಕ ಭಾಗೇಶ ಮುರಡಿ ಮುಖ್ಯ ಅತಿಥಿಯಾಗಿ ಮಾತನಾಡಿದರು.

ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎಸ್.ಬಿ ಕಲಾ ಮತ್ತು ಕೆ.ಸಿ.ಪಿ ವಿಜ್ಞಾನ ಮಹಾವಿದ್ಯಾಲಯಲ್ಲಿ ಕನ್ನಡ ವಿಭಾಗ ಮತ್ತು ಐಕ್ಯೂಎಸಿ ಅಡಿಯಲ್ಲಿ ಜರುಗಿದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಕನಡ ಬೆಳವಣಿಗೆಗೆ ನಮ್ಮ ಪೂರ್ವಜರ ಕೊಡುಗೆ ಅನನ್ಯವಾಗಿದೆ. ಇಂದು ಕನ್ನಡ ಭಾಷೆ ಉಳಿದಿರುವುದು ವಿದ್ಯಾವಂತರಿಂದಲ್ಲ, ಸಾಮಾನ್ಯ ಗ್ರಾಮೀಣ ಪ್ರದೇಶದ ಜನರಿಂದ ಆದ್ದರಿಂದ ನಾವು ಕನ್ನಡವನ್ನು ಎಲ್ಲ ವಲಯಗಳಲ್ಲಿ ಹೆಚ್ಚು ಹೆಚ್ಚು ಬಳಸುವ ಮೂಲಕ ಉಳಿಸಬೇಕು. ಅಂದಾಗ ಕರ್ನಾಟಕ ಏಕೀಕರಣ-ಕ್ಕೆ ಶ್ರಮಿಸಿದ ಹಿರಿಯ ಜೀವಿಗಳಿಗೆ ಗೌರವಿಸಿದಂತಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಗಡಿ ಪ್ರದೇಶದಲ್ಲಿ ಭಾಷಾ ವೈಷಮ್ಯಗಳು ಅಧಿಕವಾಗುತ್ತಿವೆ. ರಾಜ-ಕೀಯ ಲಾಭಕ್ಕಾಗಿ ಇಂತಹ ವಿಷಮ ಸ್ಥಿತಿಯನ್ನು ನಿರ್ಮಿಸುತ್ತಿರುವುದು ವಿಷಾದದ ಸಂಗತಿ ಎಂದರು. ಭಾಷಾವಾರು ಪ್ರಾಂತರಚನೆಗೆ ಬದ್ಧರಾಗಿರುವ ಕನ್ನಡಿಗರನ್ನು ವಿನಾಕಾರಣ ಕೆಣಕುವ ಪ್ರಯತ್ನ ಸಲ್ಲದು. ಕೊಟ್ಟಿ ದಾಖಲೆಯನ್ನು ತಂದು ಗಡಿ ಅಳೆಯುವ ಮನಸ್ಥಿತಿಗೆ ನೀವು ಬರುದಾದರೆ ಶ್ರೀವಿಜಯನ ಕವಿರಾಜಮಾರ್ಗ, ರವಿಕೀರ್ತಿಯ ಐಹೊಳೆ ಶಾಸನಗಳಿಂದ ಗಡಿ ಅಳೆಯಲು ಕನ್ನಡಿಗರು ಸಿದ್ದರಿದ್ದೇವೆ ಎಂದು ಹೇಳಿದರು.

ಈ ವೇಳೆಯಲ್ಲಿ ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಆರ್ ಎಂ. ಮಿರ್ದೆ ಅಧ್ಯಕ್ಷತೆ ವಹಿಸಿ ಮಾತನಾಡಿ, ಕನ್ನಡ ಭಾಷೆಯಲ್ಲಿ ಒಂದು ಶಕ್ತಿ ಇದೆ. ಕನ್ನಡ ಭಾಷೆಯನ್ನು ಉಳಿಸಬೇಕು ಮತ್ತು ಬೆಳಸಬೇಕು, ಬಾಷೆಯ ಅರಿವನ್ನು ಮೂಡಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಉತ್ತಮ ಜ್ಞಾನ ಪಡೆಯಬೇಕಾಗಿದೆ. ಹೆಚ್ಚು ಹೆಚ್ಚು ಓದಬೇಕು ಅಂದಾಗ ಜ್ಞಾನ ಭಂಡಾರ ಇಮ್ಮಡಿಯಾಗುತ್ತದೆ ಎಂದು ಹೇಳಿದರು.

ಕನ್ನಡ ವಿಭಾಗದ ಮುಖ್ಯಸ್ಥ ಡಾ.ಶ್ರೀನಿವಾಸ ದೊಡ್ಡಮನಿ ಪ್ರಾಸ್ತಾವಿಕವಾಗಿ ಮಾತನಾಡಿ, ಕನ್ನಡ ಭಾಷೆ ಅತ್ಯಂತ ಪ್ರಾಚೀನ ಭಾಷೆಯಾಗಿದ್ದು, ಈ ಭಾಷೆಯ ಮನುಸ್ಸುಗಳೆಲ್ಲ ಒಂದೆಡೆ ಸೇರಿ ಕರ್ನಾಟಕವೆಂದು ನಾಮಕರಣ ಮಾಡಿಕೊಂಡ ಸವಿನೆನಪಿಗಾಗಿ ಪ್ರತಿ ವರ್ಷವೂ ನವೆಂಬರ್ ಒಂದನ್ನು ನಾಡ ಹಬ್ಬವಾಗಿ ಆಚ-ರಿಸುತ್ತಿದ್ದಾರೆ. ಅದೇ ಉದ್ದೇಶದಿಂದ ಪ್ರಸ್ತುತ ಕಾರ್ಯಕ್ರಮವನ್ನು 50 ರ ಸಂಭ್ರಮಾಚರಣೆಯಂದು ಆಚ-ರಿಸುತ್ತಿದ್ದೇವೆ. ಈ ಭಾಷೆ ಅಳಿವು ಉಳಿವು ಕನ್ನಡಿಗರ ಕೈಯಲ್ಲಿಯೇ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಚಾರ್ಯ ಡಾ. ಆರ್ ಎಂ. ಮಿರ್ದೆ, ಉಪ ಪ್ರಾಚಾರ್ಯ ಪ್ರೊ. ಎ.ಬಿ.ಪಾಟೀಲ, ಐಕ್ಯೂಎಸಿ ನಿರ್ದೇಶಕರು ಡಾ.ಪಿ.ಎಸ್.ಪಾಟೀಲ, ಡಾ. ಶ್ರೀನಿವಾಸ ದೊಡ್ಡಮನಿ, ಡಾ.ಉಷಾದೇವಿ ಹಿರೇಮಠ ಸೇ-ರಿದಂತೆ ಮಹಾವಿದ್ಯಾಲಯದ ಬೋಧಕ ಬೋಧಕೇತರ ಸಿಬ್ಬಂದಿ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಡಾ.ಉಷಾದೇವಿ ಹಿರೇಮಠ ನಿರೂಪಿಸದರು, ಪ್ರೊ.ಎಸ್ ಹೆಚ್ ಹೂಗಾರ ವಂದಿಸಿದರು.

## ಕಾಟಾಚಾರದ ರಾಜ್ಯೋತ್ಸವ ಆಚರಣೆಗೆ ಕನ್ನಡ ಪರ ಹೋರಾಟಗಾರರು ಗರಂ

# ಕನ್ನಡ ರಾಜ್ಯೋತ್ಸವದಲ್ಲಿ ಧಿಕ್ಕಾರದ ಕೂಗು

ಉದಯರಶ್ಮಿ ನ್ಯೂಸ್



ನಿಡಗುಂದಿ: ತಾಲೂಕಿನಲ್ಲಿ ಕನ್ನಡ ಪರ ಹೋರಾಟಗಾರರು ಬುಧವಾರ ಕನ್ನಡ ರಾಜ್ಯೋತ್ಸವ ಪ್ರಯುಕ್ತ ದ್ಯಾಮವ್ವನ ಗುಡಿಯಿಂದ ರಸ್ತೆ ಉದ್ದಕ್ಕೂ ಕಾಲ್ನಡಿಗೆಯ ಮೂಲಕ ಎಲ್ಲಾ ಶಾಲೆಯ ವಿದ್ಯಾರ್ಥಿ ವಿದ್ಯಾರ್ಥಿನಿಯರು ಸಮಸ್ತ ಶಾಲಾ ಶಿಕ್ಷಕ/ಕಿಯರು, ಕನ್ನಡ ಅಭಿಮಾನಿಗಳು ಮೆರವಣಿಗೆ ಮೂಲಕ ಕನ್ನಡ ಶಾಲೆಯ ಆವರಣದಲ್ಲಿ ಹಾಜರಾಗಿದರು.

ತಾಲೂಕು ದಂಡಾಧಿಕಾರಿಗಳು ಹಾಗೂ ಪಟ್ಟಣ ಪಂಚಾಯತಿ ಅಧಿಕಾರಿಗಳು ಧ್ವಜಾರೋಹಣ ಮಾಡಿದರು.

ಕಾ ೦ ು ´ ರ್ ಕ ್ರ ವ ´ ು ಪ್ರಾರಂಭವಾಗುತ್ತಿದ್ದಂತೆ ಎಲ್ಲೆಡೆ ಧಿಕ್ಕಾರದ ಕೂಗು ಕೇಳಲಾರಂಭಿಸಿತು. ಕನ್ನಡ ಪರ ಹೋರಾಟಗಾರರು ಪಟ್ಟಣ ಪಂಚಾಯತಿ, ತಾಲೂಕಿನ ದಂಡಾಧಿಕಾರಿಗಳ ವಿರುದ್ಧ ಧಿಕ್ಕಾರ ಕೂಗಿದರು,

ಕನ್ನಡದ ಹೋರಾಟಗಾರರ ಧಿಕ್ಕಾರದ ಕೂಗಿಗೆ ಕಾರಣ, ಅಧಿಕಾ-ರಿಗಳು ಕನ್ನಡ ರಾಜ್ಯೋತ್ಸವವನ್ನು ಆಚರಿಸುವುದು ಆಟಕ್ಕುಂಟು ಲೆಕ್ಕಕ್ಕಿಲ್ಲ ಎನ್ನುವ ಹಾಗಿತ್ತು. ಆಚರಣೆ ಬೇಡ, ನಮಗೆ ಅನ್ಯಾಯ ಆಗಿದೆ ಎಂದು ಕನ್ನಡ ಪರ ಹೋರಾಟಗಾರರು ಧಿಕ್ಕರ ಕೂಗಿದರು.

ಧ್ವಜವನ್ನು ರಸ್ತೆ ಉದ್ದಕ್ಕೂ ಕಟ್ಟಿರುವುದಿಲ್ಲ, ವೇದಿಕೆಯನ್ನು ಸರಿಯಾಗಿ ಸಿದ್ದಪಡಿಸಿಲ್ಲ, ಕನ್ನಡಪರ ಹೋರಾಟಗಾರರನ್ನು ಹಾಗೂ ಕನ್ನಡ ಅಭಿಮಾನಿಗಳ ರಾಜ್ಯೋತ್ಸವವನ್ನು ಬೇಕು-ಬೇಡ ರೀತಿಯಲ್ಲಿ, ಆಚ-ರಿಸಿದ್ದು ಕನ್ನಡಪರ ಹೋರಾಟಗಾರರ ಕೆಂಗಣ್ಣಿಗೆ ಗುರಿಯಾಗಿದೆ.

ಶಾಲಾ ವಿದ್ಯಾರ್ಥಿ ವಿದ್ಯಾರ್ಥಿನಿಯರು ಬೆಳಗ್ಗೆ 8 ಗಂಟೆಯಿಂದ ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದು ಕಾರ್ಯಕ್ರಮದ ವಿಫಲದಿಂದಾಗಿ ಮಕ್ಕಳ ಮನಸ್ಸಿಗೆ ಕನ್ನಡ ಅಭಿಮಾನಿಗಳಿಗೆ ಕನ್ನಡ ರಾಜ್ಯೋತ್ಸವ ಇಂದು ನೋವುಂಟು ಮಾಡಿತು.

ಇದನ್ನೆಲ್ಲ ಅರಿತುಕೊಂಡ ದಂಡಾಧಿಕಾರಿಗಳು ಕನ್ನಡ ಪರ ಹೋರಾಟಗಾರರ ಮಾತುಗಳನ್ನು ಆಲಿಸಿ, 15 ದಿನಗಳ ಒಳಗಾಗಿ ಅತಿ ಖುಷಿಯಿಂದ ಸಂಭ್ರಮ ಸಡಗರದಿಂದ ಕನ್ನಡ ರಾಜ್ಯೋತ್ಸವವನ್ನು ಆಚ-ರಿಸೋಣ, ಯಾವುದೇ ತಪ್ಪು ತಡೆಗಳಿಗೆ ಕ್ಷಮಿಸಿ, ಕನ್ನಡ ಪರ ಹೋರಾಟಗಾರರ ಬೇಡಿಕೆಯಂತೆ 15 ದಿನಗಳ ಒಳಗಾಗಿ ಅದ್ದೂರಿ ಕನ್ನಡ ರಾಜ್ಯೋತ್ಸವವನ್ನು ಆಚರಿಸೋಣ ಎಂದು ಹೇಳಿ ಕನ್ನಡ ಹೋರಾಟಗಾರರ ಮನವೊಲಿಸಿದರು.

## ಸರ್ಕಾರಿ ಶಾಲೆಗೆ ಉಚಿತ ವಿದ್ಯುತ್, ನೀರು ಪೂರೈಕೆಗೆ ಸಿಎಂ ಆದೇಶಕ್ಕೆ ಶಿಕ್ಷಕರ ಸಂಘ ಸ್ವಾಗತ

# ಶಿಕ್ಷಕರ ಸಂಘದ ಬೇಡಿಕೆಗೆ ಸ್ಪಂದಿಸಿದ ಮುಖ್ಯಮಂತ್ರಿ

ಉದಯರಶ್ಮಿ ನ್ಯೂಸ್

ಆಲಮಟ್ಟಿ: ರಾಜ್ಯದ ಎಲ್ಲಾ ಸರ್ಕಾರಿ ಪ್ರಾಥಮಿಕ ಶಾಲೆಗಳಿಗೆ ಉಚಿತ ವಿದ್ಯುತ್ ಹಾಗೂ ಉಚಿತ ಕುಡಿಯುವ ನೀರು ಪೂರೈಕೆಗೆ ಕನ್ನಡ ನಾಡಿನ 50 ನೇ ರಾಜ್ಯೋತ್ಸವ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಘೋಷಿಸಿದ್ದು ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ ಸ್ವಾಗತಿಸಿದೆ.

ಈ ಬಗ್ಗೆ ಪ್ರಕಟಣೆ ನೀಡಿರುವ ಸಂಘಟನೆಯ ಪದಾಧಿಕಾರಿಗಳು

ಕಳೆದ ಕೆಲ ದಿನಗಳ ಹಿಂದೆಯೂ ಸಂಘ ಈ ಕುರಿತು ಮನವಿ ಸಲ್ಲಿಸಿತ್ತು. ಅಲ್ಲದೇ ಬುಧವಾರ ಬೆಳಿಗ್ಗೆ ರಾಜ್ಯೋತ್ಸವ ಸಮಾರಂಭದಲ್ಲಿ ಭಾಗವಹಿಸಲು ಆಗಮಿಸಿದ್ದ ಮುಖ್ಯಮಂತ್ರಿಗಳಿಗೆ ಸಂಘ ಮತ್ತೊಮ್ಮೆ ಮನವಿ ಸಲ್ಲಿಸಿತು. ಇದಕ್ಕೆ ಪೂರಕವಾಗಿ ಸ್ಪಂದಿಸಿದ ಮುಖ್ಯಮಂತ್ರಿಗಳು ತಮ್ಮ ರಾಜ್ಯೋತ್ಸವ ಭಾಷಣದಲ್ಲಿ ಸರ್ಕಾರಿ ಶಾಲೆಗಳಿಗೆ ಉಚಿತ ವಿದ್ಯುತ್ ಹಾಗೂ ಉಚಿತ ಕುಡಿಯುವ ನೀರಿನ ಘೋಷಣೆ ಮಾಡಿದ್ದಾರೆ. 50 ನೇ ಕನ್ನಡ ರಾಜ್ಯೋತ್ಸವದ ಸಂದರ್ಭದಲ್ಲಿ ಈ ಘೋಷಣೆ ಸರ್ಕಾರಿ ಕನ್ನಡ ಶಾಲೆಗಳ ಉಳಿವಿಗೆ ಸರ್ಕಾರ ತನ್ನ ಬದ್ಧತೆಯನ್ನು ಪ್ರದರ್ಶಿಸಿದಂತಾಗಿದೆ.

ಇದರಿಂದ ರಾಜ್ಯದ ಸುಮಾರು 50 ಲಕ್ಷ ವಿದ್ಯಾರ್ಥಿಗಳು ಹಾಗೂ ಅವರ ಪೋಷಕರ ಪರವಾಗಿ ಸಂಘ ಮುಖ್ಯಮಂತ್ರಿಗಳನ್ನು ಹಾಗೂ ಶಿಕ್ಷಣ ಸಚಿವರನ್ನು ಅಭಿನಂದಿಸುತ್ತದೆ.

ಪ್ರತಿ ಸರ್ಕಾರಿ ಶಾಲೆಗಳಿಗೆ ನಿರ್ವಹಣೆಗಾಗಿ ಅನುದಾನ ಅತಿ ಕಡಿಮೆ ಬರುತ್ತದೆ. ಇಂತಹ ಸಂದರ್ಭದಲ್ಲಿ ಶಾಲೆಯಲ್ಲಿನ ಕಂಪ್ಯೂಟರ್, ಸ್ಮಾರ್ಟ್ ಕ್ಲಾಸ್ ಹಾಗೂ ನಾನಾ ಸಂದರ್ಭಗಳಲ್ಲಿ ದಿನನಿತ್ಯ ವಿದ್ಯುತ್ ಬಳಕೆ ಹೆಚ್ಚಿರುತ್ತದೆ. ಪ್ರತಿ ತಿಂಗಳು ಹೆಸ್ಕಾಂದವರಿಗೆ ವಿದ್ಯುತ್ ಶುಲ್ಕ ಪಾವತಿ ಮಾಡುವುದೇ ಶಾಲೆಯ ಮುಖ್ಯಗುರುಗಳಿಗೆ ದೊಡ್ಡ ತಲೆನೋವಾಗಿತ್ತು.

ಕುಡಿಯುವ ನೀರು ಪೂರೈಕೆಗಾಗಿ ಸ್ಥಳೀಯ ಗ್ರಾಮ ಪಂಚಾಯ್ತಿಗೆ ಶಾಲಾ ಸಿಬ್ಬಂದಿ ಮೇಲಿಂದ ಮೇಲೆ ಮನವಿ ಮಾಡಬೇಕಿತ್ತು.

ಈಗ ಅದು ಕೂಡಾ ಉಚಿತವಾಗಿ ಪೂರೈಸಲು ಸರ್ಕಾರ ನಿರ್ಧರಿಸಿದೆ.

ಪ್ರತಿ ಮನೆಗೂ ಉಚಿತ ವಿದ್ಯುತ್ ನೀಡಲಾಗುತ್ತಿದೆ. ಕಳೆದ ಕೆಲ ದಿನಗಳ ಹಿಂದೆ ಮುಜರಾಯಿ ಇಲಾಖೆಯ ದೇವಾಲಯಗಳಿಗೂ ಉಚಿತ ವಿದ್ಯುತ್ ಪೂರೈಕೆಯ ಪ್ರಸ್ತಾವನೆಯೂ ಬಂದಿದೆ. ಇಂತಹ ಸಂದರ್ಭದಲ್ಲಿ ಸಂಘ ಮಾಡಿದ ಮನವಿಗೆ ತಕ್ಷಣ ಸ್ಪಂದಿಸಿರುವ ಸರ್ಕಾರಕ್ಕೆ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯ ಘಟಕದ ಅಧ್ಯಕ್ಷ ನಾಗೇಶ ಹಾಗೂ ಪ್ರಧಾನ ಕಾರ್ಯದರ್ಶಿ ಚಂದ್ರಶೇಖರ



# ನಾಡು-ನುಡಿ ಬೆಳವಣಿಗೆಗೆ ಕಂಕಣಬದ್ಧರಾಗಿ: ಡಾ.ಮುಚ್ಚಂಡಿ



ಉದಯರಶ್ಮಿ ನ್ಯೂಸ್

ವಿಜಯಪುರ: ನಗರದ ಜಿಲ್ಲಾ ಆಸ್ಪತ್ರೆ ಯ krsna CT& MRI ವಿಭಾಗದಲ್ಲಿ ಬುಧವಾರ ಕನ್ನಡ ರಾಜ್ಯೋತ್ಸವವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಶಿವಾನಂದ ಮಾಸ್ತಿಹೊಳಿ ಹಾಗೂ krsna CT& MRI ವಿಭಾಗದ ಮುಖ್ಯಸ್ಥ ಡಾ.ರಾಜಶೇಖರ ಮುಚ್ಚಂಡಿ ಮಾತನಾಡಿ, ನಮ್ಮ ರಾಜ್ಯಕ್ಕೆ ಕರ್ನಾಟಕ ಎಂದು ನಾಮಕರಣ ಮಾಡಿ 50 ವರ್ಷ ತುಂಬಿದ ಸುವರ್ಣ ಸಂದರ್ಭದಲ್ಲಿ ನಾವಿದ್ದೇವೆ. ಈ ಸಂಭ್ರಮದಲ್ಲಿರುವ ನಾವು ಕನ್ನಡ ನಾಡು-ನುಡಿಯು ಬೆಳವಣಿಗೆಗೆ ಹಾಗೂ ನಮ್ಮ ನೆಲ-ಜಲದ ಉಳಿವಿಗೆ ಕಂಕಣಬದ್ಧರಾಗೋಣ. ಅನ್ನದ ಭಾಷೆಯಾಗಿರುವ ಕನ್ನಡವನ್ನು ಉಳಿಸಿ ಬೆಳೆಸೋಣ ಎಂದು ಕರೆ ನೀಡಿದರು.

ವೈದ್ಯಾಧಿಕಾರಿ ಡಾ.ಸಿಎಂ. ರಾಠೋಡ, ಉಪ ಮುಖ್ಯ ವೈದ್ಯಾಧಿಕಾ-ರಿಗಳಾದ ಡಾ.ಸುರೇಶ ಚವ್ಹಾಣ, ಡಾ.ಎ.ಜಿ.ಬಿರಾದಾರ, ಹಿರಿಯ ತಜ್ಞ ವೈದ್ಯರಾದ ಡಾ.ಪರಶುರಾಮ ದೇವಮಾನೆ, ಡಾ.ಮಹೇಶ ಮೋರೆ, ಹಿರಿಯ ವೈದ್ಯಾಧಿಕಾರಿ ಡಾ. ಎಸ್. ಎಂ. ತಿಮ್ಮಾಪೂರ, ಡಾ.ಪಾಂಡುರಂಗ ದೊಡಮನಿ, ಕೇಂದ್ರ ವ್ಯವಸ್ಥಾಪಕ ವಿಶಾಲ ಜಂಗಮ ಮತ್ತು krsna CT& MRI ವಿಭಾಗದ ಸಿಬ್ಬಂದಿ ಸೇರಿದಂತೆ ಹಲವರಿದ್ದರು.

ಡಾ.ಮಹೇಶ ಮೋರೆ ನಾಡಗೀತೆ ಹಾಡಿದರು.